ಜನಮನದ ದನಿ

ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

ವಿಯಟ್ನಾಂನಲ್ಲಿ ಒಂದು ವಾರದಿಂದ ಸುರಿಯುತ್ತಿರುವ ಭಾರೀ ಮಳೆಯಿಂದ ಉಂಟಾದ ಪ್ರವಾಹ ಮತ್ತು ಭೂ ಕುಸಿತದಲ್ಲಿ 90 ಮಂದಿ ಮೃತಪಟ್ಟಿದ್ದಾರೆಂದು ವಿಕೋಪ ನಿಯಂತ್ರಣ ಸಂಸ್ಥೆ ಮಾಹಿತಿ ನೀಡಿದೆ.

24 ನವೆಂಬರ್ 2025 ಸೋಮವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 253 ಪುಟ-4 ಹಾಸನ E-mail : prajodayahsn@gmail.com RNI NO: KARKAN/2007/22629

ನಾವೂ.... ನಮ್ಮ ವೆಕೆಷನ್ನೂ.... » 2

ದೆಹಲಿ : ರಸಗೊಬ್ಬರ ಹೆಸರಿನಲ್ಲಿ ಸ್ಫೋಟಕ ಸಂಗ್ರಹ » 3

ಕಾಂಗ್ರೆಸ್ ಜಟಾಪಟಿಗೆ ತಾತ್ಕಾಲಿಕ ಬ್ರೇಕ್ » 4

ಕಾಂಗ್ರೆಸ್ ಗೆಲುವಿಗೆ ಒಬ್ಬರೇ ಕಾರಣವಲ್ಲ

ಡಿ.ಕೆ.ಶಿವಕುಮಾರ್‌ಗೆ ಸಿದ್ದು ಬಣದ ಟಕ್ಕರ್ | ಉತ್ತರ ಕರ್ನಾಟಕ ಸಚಿವರ ವಿಶ್ವಾಸಕ್ಕೆ ಯತೀಂದ್ರ ಯತ್ನ

• ಪ್ರಜೋದಯ ವರದಿ

ಬೆಂಗಳೂರು: ರಾಜ್ಯ ರಾಜಕಾರಣದಲ್ಲಿ ಸಂಚಲನ ಸೃಷ್ಟಿಸಿರುವ ನಾಯಕತ್ವ ಬದಲಾವಣೆ ವಿಚಾರ ದಿನಕ್ಕೊಂದು ತಿರುವು ಪಡೆಯುತ್ತಿದ್ದು, ಒಬ್ಬರ ಶ್ರಮದಿಂದ ಕಾಂಗ್ರೆಸ್ ಅಧಿಕಾರಕ್ಕೆ ಬಂದಿಲ್ಲವೆನ್ನುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಬಣದ ಸಚಿವರು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಗೆ ಟಕ್ಕರ್ ಕೊಟ್ಟಿದ್ದಾರೆ.

ನ.20ಕ್ಕೆ ಸರ್ಕಾರಕ್ಕೆ ಎರಡೂವರೆ ವರ್ಷ ಪೂರ್ಣಗೊಳ್ಳುತ್ತಿದ್ದಂತೆ ಮುಖ್ಯಮಂತ್ರಿ ಬದಲಾವಣೆ ಸದ್ದು ಜೋರಾಗಿದೆ. ಶಿವಕುಮಾರ್ ಬೆಂಬಲಿಗ ಕೆಲ ಶಾಸಕರು ದೆಹಲಿ ಯಾತ್ರೆ ಕೈಗೊಂಡರೆ ಇತ್ತ ಶಿವಕುಮಾರ್ ಶಾಸಕರ ವಿಶ್ವಾಸ ಪಡೆಯಲು ತಮ್ಮದೇಯಾದ ಕಸರತ್ತು ನಡೆಸುತ್ತಿದ್ದಾರೆ. ಡಿ.ಕೆ.ಶಿವಕುಮಾರ್ ಅವರನ್ನು ಗುರಿಯಾಗಿಸಿ ಸಚಿವರಾದ ಸತೀಶ್ ಜಾರಕಿಹೊಳಿ, ಡಾ.ಹೆಚ್.ಸಿ.ಮಹದೇವಪ್ಪ, ಡಾ.ಜಿ. ಪರಮೇಶ್ವರ್ ಖಡಕ್ ತಿರುಗೇಟು ನೀಡಿದ್ದಾರೆ. ನ.28ಕ್ಕೆ ವಿದೇಶದಿಂದ ವಾಪಾಸ್ಸಾಗುವ ಕಾಂಗ್ರೆಸ್ ನಾಯಕ ರಾಹುಲ್

ಗಾಂಧಿ ಅವರು ರಾಜ್ಯ ರಾಜಕಾರಣ ಬಗ್ಗೆ ಚರ್ಚಿಸಲಿದ್ದು, ಮುಖ್ಯಮಂತ್ರಿ ಹಾಗು ಉಪ ಮುಖ್ಯಮಂತ್ರಿ ಶಾಸಕರ ಬೆಂಬಲ ಪ್ರದರ್ಶಿಸಲು ಶ್ರಮಿಸುತ್ತಿದ್ದಾರೆ. ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಉತ್ತರ ಕರ್ನಾಟಕದ ಶಾಸಕರ ಬೆಂಬಲಕ್ಕಾಗಿ ಅಲ್ಲಿಯೇ ಮೊಕ್ಕಾಂ ಹೂಡಿದ್ದಾರೆ.

ಎಲ್ಲರದ್ದೂ ಸಮಾನ ಶ್ರಮವಿದೆ

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಯಾರೊಬ್ಬರ ಶ್ರಮದಿಂದ ಬಂದಿಲ್ಲ. ಸಾಮಾನ್ಯ ಕಾರ್ಯಕರ್ತರಿಂದ ಹಿಡಿದು ಹಿರಿಯ ನಾಯಕರವರೆಗೆ ಎಲ್ಲರ ಶ್ರಮವೂ ಇದೆ. ನಮಗಿರುವ 1.25 ಕೋಟಿ ಮತದಾರರಿಂದ ನಾವು ಶಾಸಕರು, ಮಂತ್ರಿ ಆಗಿದ್ದೇವೆ. ತನ್ನಿಂದಲೇ ಸರ್ಕಾರ ರಚನೆಯಾಗಿದೆ ಎಂದು ಯಾರಾದರೂ ಹೇಳಿದರೆ ಅದನ್ನು ನಾನು ಒಪ್ಪುವುದಿಲ್ಲವೆಂದು ಸಚಿವ ಸತೀಶ ಜಾರಕಿಹೊಳಿ ಹೇಳಿದರು.

> ರಾಜ್ಯ ಕಾಂಗ್ರೆಸ್‌ನಲ್ಲಿ ನಡೆಯುತ್ತಿರುವ ಸದ್ಯದ ಬೆಳವಣಿಗೆ ಬಗ್ಗೆ ಏನೂ ಹೇಳುವುದಿಲ್ಲ. ಏನೇ ಇದ್ದರೂ ಹೈಕಮಾಂಡ್ ತೀರ್ಮಾನ ಮಾಡುತ್ತದೆ. ಈಗ ನಡೆದ ವಿದ್ಯಮಾನಗಳ ಬಗ್ಗೆ ಹೇಳಲು ನನ್ನ ಬಳಿ ಏನೂ ಇಲ್ಲ. ಯಾವ ವಿಚಾರದಲ್ಲಿಯೂ ಹೇಳಲು ಏನೂ ಇಲ್ಲ.
>
> -ಮಲ್ಲಿಕಾರ್ಜುನ ಖರ್ಗೆ, ಎಐಸಿಸಿ ಅಧ್ಯಕ್ಷ

ಪಕ್ಷವನ್ನು ಅಧಿಕಾರಕ್ಕೆ ತರುವಲ್ಲಿ ಎಲ್ಲರೂ ಕಷ್ಟ, ನಷ್ಟ ಅನುಭವಿಸಿದ್ದಾರೆ. ಒನ್ ಮ್ಯಾನ್ ಶೋ ವಿಚಾರವನ್ನು ನಾನು ನಂಬುವುದಿಲ್ಲ. ಮುಖ್ಯಮಂತ್ರಿ ಯಾರಾಗಬೇಕು, ಯಾವಾಗ ಆಗಬೇಕೆಂದು ಹೈಕಮಾಂಡ್ ನಿರ್ಧರಿಸುತ್ತದೆ. ಸದ್ಯ ಯಾವುದೇ ಚರ್ಚೆಯೂ ನಡೆದಿಲ್ಲ. ಚರ್ಚೆಗೆ ದೆಹಲಿಗೆ ಬನ್ನಿ ಎಂದು ನನ್ನನ್ನು ಕರೆದರೆ ಖಂಡಿತ ಹೋಗುತ್ತೇನೆಂದು ಅವರು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.

ನಾನೂ ಮುಖ್ಯಮಂತ್ರಿ ಆಕಾಂಕ್ಷಿ

ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಮಾತನಾಡಿ, ನಾನು ಯಾವಾಗಲೂ ಮುಖ್ಯಮಂತ್ರಿ ರೇಸ್‌ನಲ್ಲಿದ್ದೇನೆ. 2013ರಲ್ಲಿ ಕೆಪಿಸಿಸಿ ಅಧ್ಯಕ್ಷನಾಗಿದ್ದಾಗ ಸರ್ಕಾರವನ್ನು ಅಧಿಕಾರಕ್ಕೆ ತರಲು ಎಲ್ಲರೂ ಒಟ್ಟಾಗಿ ಕೆಲಸ ಮಾಡಿದ್ದೇವೆ. ಆ ಸಂದರ್ಭದಲ್ಲಿ ನಾನು ಚುನಾವಣೆಯಲ್ಲಿ ಪರಾಭವಗೊಂಡಿದ್ದರಿಂದ ಅವಕಾಶ ತಪ್ಪಿತ್ತು. ಮುಖ್ಯಮಂತ್ರಿ ಬದಲಾವಣೆ ವಿಚಾರದ ಬಗ್ಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಗಾಂಧಿ ಅಂತಿಮ ನಿರ್ಧಾರ ತೆಗೆದುಕೊಳ್ಳುತ್ತಾರೆಂದರು.

ಇನ್ನು ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರು ಮಾತನಾಡಿ, ಕೇವಲ ಒಬ್ಬರ ಶ್ರಮದಿಂದ ಪಕ್ಷ ಅಧಿಕಾರಕ್ಕೆ ಬಂದಿಲ್ಲ. ಪಕ್ಷದಲ್ಲಿ ಆಗುತ್ತಿರುವ ಪ್ರತಿ ಘಟನೆಗಳನ್ನು ಹೈಕಮಾಂಡ್ ಗಮನಿಸುತ್ತಿದ್ದು ಸೂಕ್ತ ನಿರ್ಧಾರ ಕೈಗೊಳ್ಳುತ್ತದೆ ಎಂದರು.

ಸರ್ಕಾರ ಪತನವಾಗುತ್ತದೆಂಬ ಭ್ರಮೆ ಇಲ್ಲ: ಹೆಚ್.ಡಿ.ಕೆ.

ರಾಜ್ಯ ಕಾಂಗ್ರೆಸ್ ಸರ್ಕಾರ ಅಷ್ಟು ಸುಲಭವಾಗಿ ಬಿದ್ದು ಹೋಗುತ್ತದೆ ಎಂಬುದರ ಮೇಲೆ ನಾನೇನು ನಂಬಿಕೆ ಇಟ್ಟುಕೊಂಡಿಲ್ಲ, ಆ ಭ್ರಮೆಯಲ್ಲೂ ಇಲ್ಲ. ಏಕೆಂದರೆ ಮುಖ್ಯಮಂತ್ರಿ ಕುರ್ಚಿಗೆ ಪೈಪೋಟಿ ಇದ್ದರೂ ಸಿಕ್ಕಿರುವ ಅವಕಾಶದಲ್ಲೇ ಎಷ್ಟು ಬೇಕು ಅಷ್ಟು ದೋಚಬೇಕೆಂಬ ಭಾವನೆ ಅವರಲ್ಲಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ವ್ಯಂಗ್ಯವಾಡಿದರು.

ಕೋಲಾರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆರು ತಿಂಗಳಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರ ಬಿದ್ದು ಹೋಗುತ್ತದೆ, ಕ್ರಾಂತಿ ಆಗುತ್ತದೆ ಎಂಬುದಾಗಿ ನಾನು ಎಲ್ಲೂ ಹೇಳಿಲ್ಲ, ಆ ಬಗ್ಗೆ ಹಗಲು ಕನಸು ಕೂಡ ಕಾಣುತ್ತಿಲ್ಲ ಎಂದರು.

ಹೈಕಮಾಂಡ್ ಹೇಳಿದರೂ ಸಿದ್ದರಾಮಯ್ಯ ರಾಜೀನಾಮೆ ನೀಡಲ್ಲ

• ಪ್ರಜೋದಯ ವರದಿ

ಬೆಂಗಳೂರು: ಹೈಕಮಾಂಡ್ ಹೇಳಿದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ಕೊಡುವುದಿಲ್ಲ. ಇಬ್ಬರ ಅಧಿಕಾರದ ಗುದ್ದಾಟದಲ್ಲಿ ಸರ್ಕಾರ ಪತನವಾಗುತ್ತದೆಂದು ಸಂಸದ ಜಗದೀಶ್ ಶೆಟ್ಟರ್ ಅವರು ಭವಿಷ್ಯ ನುಡಿದಿದ್ದಾರೆ.

ಸುದ್ದಿಗಾರರೊಂದಿಗೆ ಭಾನುವಾರ ಮಾತನಾಡಿದ ಅವರು, ಯಾರ ಸೂಚನೆಗೂ ಸಿದ್ದರಾಮಯ್ಯ ತಲೆ ಬಾಗುವುದಿಲ್ಲ. ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗಲೇಬೇಕು ಎನ್ನುವ ಹಠ ಬಿಡುತ್ತಿಲ್ಲ. ಕುರ್ಚಿ ಕಿತ್ತಾಟದಿಂದ ರಾಜ್ಯದಲ್ಲಿ ಅಭಿವೃದ್ಧಿ ನೇಪಥ್ಯಕ್ಕೆ ಸರಿದಿದೆ. ಶೀಘ್ರ ಗೊಂದಲಗಳಿಗೆ ತೆರೆ ಎಳೆಯಬೇಕೆಂದು ಆಗ್ರಹಿಸಿದರು.

ಹೆಚ್.ಡಿ.ಕುಮಾರಸ್ವಾಮಿ ಅಧಿಕಾರ ಕಳೆದುಕೊಳ್ಳಲು ಸಿದ್ದರಾಮಯ್ಯ ಕಾರಣವೆಂಬ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಹೇಳಿಕೆಗೆ ಪ್ರತಿಕ್ರಿಯಿಸಿ, ದೇವೇಗೌಡರು ರಾಜಕೀಯವಾಗಿ ಅಪಾರ ಅನುಭವವಿರುವ ವ್ಯಕ್ತಿ. ಸಿದ್ದರಾಮಯ್ಯ ಜೆಡಿಎಸ್‌ನಲ್ಲಿರುವ ಸಮಯದಲ್ಲಿ ಅವರ ಚಲನ

ವಲನ, ಗುಣವನ್ನು ಹತ್ತಿರದಿಂದ ಮಾಜಿ ಪ್ರಧಾನಿ ಕಂಡಿದ್ದಾರೆ. ದೇವೇಗೌಡರು ಹಿರಿಯ ನಾಯಕರು. ಬಹಳಷ್ಟು ಮಂದಿಯನ್ನು ನಾಯಕರನ್ನಾಗಿ ಮಾಡಿ ಬೆಳೆಸಿದ್ದಾರೆ. ಹೀಗಾಗಿ ಅವರ ಹೇಳಿಕೆಯಲ್ಲಿ ಸತ್ಯಾಂಶವಿದೆ ಎಂದರು.

ಸಿದ್ದರಾಮಯ್ಯ ಅವರು ಅಧಿಕಾರ ದಾಹಕ್ಕಾಗಿ ಇಂತಹ ಕೆಲಸ ಮಾಡಿರುವ ಉದಾಹರಣೆ ಸಾಕಷ್ಟಿವೆ. ಕಾಂಗ್ರೆಸ್ ಪಕ್ಷಕ್ಕೆ ಹೊಸದಾಗಿ ಸೇರ್ಪಡೆಯಾದರೂ, ಪಕ್ಷ ಅವರನ್ನು ಮುಖ್ಯಮಂತ್ರಿಯನ್ನಾಗಿ ಮಾಡಿದೆ. ದೇವೇಗೌಡರ ಹೇಳಿಕೆಗೆ ಸ್ವತಃ ಸಿದ್ದರಾಮಯ್ಯ ಅವರೇ ಸ್ಪಷ್ಟನೆ ನೀಡಬೇಕೆಂದರು.

ಅಂಬೇಡ್ಕರ್ ಮಾದರಿಯ ಹೋರಾಟ ರೂಪಿಸಲು ಸಲಹೆ

• ಪ್ರಜೋದಯ ವರದಿ

ಅರಕಲಗೂಡು: ಇಂದಿನ ಯುವಕರು ಹಿರಿಯ ಹೋರಾಟಗಾರರ ತ್ಯಾಗ ಬಲಿದಾನವನ್ನು ಅರಿತು ಅವರ ಮಾರ್ಗದರ್ಶನದಲ್ಲಿ ಹೋರಾಟಗಳನ್ನು ರೂಪಿಸಿಕೊಂಡು ನೊಂದವರಿಗೆ ನ್ಯಾಯ ಕೊಡಿಸುವ ಕೆಲಸ ಮಾಡಬೇಕೆಂದು ಮಾಜಿ ಸಚಿವ ಎ. ಮಂಜು ಅವರು ಸಲಹೆ ನೀಡಿದರು.

ರಾಮನಾಥಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಿಳಗುಲಿ ಗ್ರಾಮದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಯುವಕರ ಸಂಘದಿಂದ ಹಮ್ಮಿಕೊಂಡಿದ್ದ ಅಂಬೇಡ್ಕರ್ ಪುತ್ಥಳಿ ಅನಾವರಣ ಸಮಾರಂಭದಲ್ಲಿ ಮಾತನಾಡಿದ ಅವರು, ಅಂಬೇಡ್ಕರ್ ಹಾಕಿಕೊಟ್ಟ ಆದರ್ಶಗಳನ್ನು ಅಳವಡಿಸಿಕೊಂಡು ನಡೆಯಬೇಕೆಂದರು.

ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಕೆ.ಎಂ.ಜಾನಕಿ ಅವರು ಮಾತನಾಡಿ, ನಮ್ಮ ಸಂಘಟನೆ ಅಂಬೇಡ್ಕರ್ ಅವರ ತತ್ವಾ ದರ್ಶಕ್ಕೆ ಕಳಂಕ ಆಗದಂತೆ ಉತ್ತಮ ಮಾರ್ಗದರ್ಶನದಲ್ಲಿ ನಡೆಯ ಬೇಕೆಂದರು.

ಮೈಸೂರು ಅಕಾಡೆಮಿ ಐ.ಎಸ್.



ಶಿವಕುಮಾರ್ ಅವರು ಮಾತನಾಡಿ, ಇಂದಿನ ವಿದ್ಯಾರ್ಥಿಗಳು ಅರಿವು ಸಂಸ್ಕಾರದ ಸತ್ವ, ಶಿಕ್ಷಣದ ಮಹತ್ವವನ್ನು ಪರಿಪೂರ್ಣವಾಗಿ ಅರಿತು ಸಾಗಿದರೆ ಮಾತ್ರ ಸತ್ಪಜೆಗಳಾಗಿ ಬೆಳೆಯಬಹುದು ಮತ್ತು ನಿತ್ಯ ಕನಿಷ್ಠ ಐದು ಗಂಟೆಗಳ ಕಾಲ ಮನೆಯಲ್ಲಿ ಓದುವ ಹವ್ಯಾಸ ರೂಢಿಸಿಕೊಂಡು ಡಾ. ಅಂಬೇಡ್ಕರ್ ಅವರು ಹಾಕಿಕೊಟ್ಟ ಸಂವಿಧಾನವನ್ನು ಉಳಿಸುವ ಹಾಗು ರಕ್ಷಿಸುವ ಕೆಲಸ ಮಾಡಬೇಕೆಂದು ತಿಳಿಸಿದರು.

ಕೆಎಎಸ್ ಹಿರಿಯ ಶ್ರೇಣಿ ಅಧಿಕಾರಿ ಬಿ.ಆರ್.ಮಹೇಶ್, ಜಿಲ್ಲಾ ವಾಣಿಜ್ಯ ತೆರಿಗೆ ಇಲಾಖೆ ಸಹಾಯಕ ಆಯುಕ್ತ ಎಂ.ಬಿ.ಚನ್ನಕೇಶವ, ತಹಶೀಲ್ದಾರ್ ಗ್ರೇಡ್ 2 ಸಿ.ಸ್ವಾಮಿ, ವಿಷ್ಣುಪ್ರಕಾಶ್, ಈರೇಶ್ ಹಿರೇಹಳ್ಳಿ, ಬಿಎಸ್‌ಪಿ ರಾಜ್ಯ ಕಾರ್ಯದರ್ಶಿ ಹರೀಶ್ ಅತ್ತಿ, ಗ್ರಾಮ ಪಂಚಾಯಿತಿ ಅಧ್ಯಕ್ಷ ಪವನ ಕುಮಾರ್, ಉಪಾಧ್ಯಕ್ಷ ಸಿದ್ದರಾಜು, ಮಾಜಿ ಉಪಾಧ್ಯಕ್ಷ ಮಾದೇಶ್, ಸದಸ್ಯರಾದ ವರದಮ್ಮ, ಮಹದೇಶ್, ಮೋಹನ್ ಇತರರಿದ್ದರು.

ಜಿಲ್ಲೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ: ಸಕಲ ಸಿದ್ಧತೆ

ಡಿ. 6ಕ್ಕೆ ವಿವಿಧ ಅಭಿವೃದ್ಧಿ ಕಾಮಗಾರಿಗೆ ಚಾಲನೆ | ಕಾರ್ಯಕರ್ತರಲ್ಲಿ ಹುಮ್ಮಸ್ಸು

• ಪ್ರಜೋದಯ ವರದಿ

ಹಾಸನ: ನಾಯಕತ್ವ ಬದಲಾವಣೆಯ ಜೋರು ಚರ್ಚೆ ನಡುವೆ ಡಿ.6ಕ್ಕೆ ನಗರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ ನಿಗದಿ ಯಾಗಿದ್ದು, ಜಿಲ್ಲಾಡಳಿತ ಅಗತ್ಯ ಸಿದ್ಧತೆ ಮಾಡಿಕೊಳ್ಳುತ್ತಿದೆ.

ಜು.26 ರಂದು ಅರಸೀಕೆರೆಗೆ ಬಂದಿದ್ದ ಸಿದ್ದರಾಮಯ್ಯ ನೂರಾರು ಕೋಟಿ ರೂ. ವೆಚ್ಚದ ಕಾಮಗಾರಿಗೆ ಚಾಲನೆ ಹಾಗು ಶಂಕುಸ್ಥಾಪನೆ ನೆರವೇರಿಸಿದ್ದರು. ನಂತರ ಅ.15 ರಂದು ಹಾಸನಾಂಬ ದರ್ಶನಕ್ಕಾಗಿ ಹಾಸನಕ್ಕೆ ಭೇಟಿ ನೀಡಿದ್ದರು. ಐದು ತಿಂಗಳಲ್ಲಿ ಮೂರನೇ ಬಾರಿಗೆ ಜಿಲ್ಲೆಗೆ ಭೇಟಿ ನೀಡುತ್ತಿದ್ದು, ಪಕ್ಷದ ಕಾರ್ಯಕರ್ತರಲ್ಲಿ ಹುಮ್ಮಸು ಮೂಡಿದೆ. ವಿವಿಧ ಅಭಿವೃದ್ಧಿ ಕಾಮಗಾರಿಗೆ ಚಾಲನೆ ಹಾಗು ಶಂಕುಸ್ಥಾಪನೆಗಾಗಿ ಅವರು ಭೇಟಿ ನೀಡಲಿದ್ದಾರೆ.

ನೂತನ ಕಂದಾಯ ಗ್ರಾಮಗಳ ನಿವಾಸಿಗಳಿಗೆ ಹಕ್ಕುಪತ್ರ ವಿತರಣೆ ಹಾಗು ನಾನಾ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲಿದ್ದಾರೆ. ಕಾಚೇನಹಳ್ಳಿ ಏತ ನೀರಾವರಿ 3ನೇ ಹಂತದ ಯೋಜನೆಗೆ ಸರ್ಕಾರ 200 ಕೋ. ರೂ. ಅನುದಾನ ನೀಡಿದ್ದು, ದೂತನೂರು ಕೆರೆಯಿಂದ ತರಬೇನಹಳ್ಳಿ ಕಾಲುವೆವರೆಗೆ ನೀರು ಹರಿಯಲಿದ್ದು, ಕಾಮಗಾರಿಗೆ ಮುಖ್ಯಮಂತ್ರಿ ಭೂಮಿ ಪೂಜೆ ನೆರವೇರಿಸುವರು. ಬಿ.ಎಂ. ರಸ್ತೆಯಲ್ಲಿ ನಿರ್ಮಿಸಿರುವ ನೂತನ ತಾಲ್ಲೂಕು ಕಚೇರಿ ಪ್ರಜಾಸೌಧ ಕಟ್ಟಡ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಹೊಸ ಬಸ್ ನಿಲ್ದಾಣ ಪಕ್ಕ ನಿರ್ಮಾಣವಾಗಿರುವ ಪಾರ್ಕ್ ಅನ್ನು ಸಿದ್ದರಾಮಯ್ಯ ಉದ್ಘಾಟಿಸುವರು.

ಪಟ್ಟಿ ಸಲ್ಲಿಸಲು ಶಾಸಕರ ತಯಾರಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಆಗಮನ ಹಿನ್ನಲೆಯಲ್ಲಿ ತಮ್ಮ ತಮ್ಮ ಕ್ಷೇತ್ರದಲ್ಲಿ ಆಗಬೇಕಿರುವ ಕೆಲಸಗಳ ಕುರಿತು ಮುಖ್ಯಮಂತ್ರಿಗೆ ಪಟ್ಟಿ ಸಲ್ಲಿಸಲು ಶಾಸಕರು ತಯಾರಿ ನಡೆಸಿದ್ದಾರೆ. ಆ ಹಿನ್ನಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ

ಅವರು ಇತ್ತೀಚೆಗೆ ಜಿಲ್ಲೆಯ ಶಾಸಕರು ಹಾಗು ಸಂಸದರ ಸಭೆ ನಡೆಸಿದ್ದಾರೆ. ಡಿ.6ರ ಕಾರ್ಯಕ್ರಮ ಯಶಸ್ಸಿಗೆ ಸಹಕರಿಸಬೇಕು ಹಾಗು ಅಭಿವೃದ್ಧಿ ಸಂಬಂಧ ವಿಚಾರಗಳನ್ನು ಗಮನಕ್ಕೆ ತರಬೇಕೆಂದು ಸೂಚಿಸಿದ್ದಾರೆ.

ಹಾಸನಾಂಬ ದೇಗುಲಕ್ಕೆ ನೂತನ ಸ್ಪರ್ಶ

ಹಾಸನದಲ್ಲಿ ಮುಖ್ಯವಾಗಿ ಆಗಬೇಕಿರುವುದು ಹಾಸನಾಂಬ ಜಾತ್ರೆ ವೇಳೆ ಭಕ್ತರಿಗೆ ಸುಲಭ ದರ್ಶನ. ಶಕ್ತಿದೇವತೆಯ ದರ್ಶನಕ್ಕಾಗಿ ಬರುತ್ತಿರುವ ಭಕ್ತರ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಲೇ ಇದೆ. ವರ್ಷಕ್ಕೊಮ್ಮೆ ಮಾತ್ರ ಬಾಗಿಲು ತೆರೆಯುವುದರಿಂದ ಜನದಟ್ಟಣೆ ನಿಯಂತ್ರಣ ಜಿಲ್ಲಾಡಳಿತಕ್ಕೂ ಸವಾಲಿನ ಕೆಲಸವಾಗಿದೆ. ಈ ಬಾರಿ ಅಚ್ಚುಕಟ್ಟು ವ್ಯವಸ್ಥೆಯಿಂದಾಗಿ ಯಾವ ಸಮಸ್ಯೆ ಇಲ್ಲದಂತೆ ಮಹೋತ್ಸವ ಮುಗಿದಿದೆ. ಆದರೆ, ಸರಳ ದರ್ಶನಕ್ಕಾಗಿ ಬೇರೆ ವ್ಯವಸ್ಥೆ ಮಾಡಬೇಕೆನ್ನುವುದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರ ಅಪೇಕ್ಷೆ. ದೇವಾಲಯದ ವಾಸ್ತುಶಿಲ್ಪ ಶೈಲಿಯನ್ನು ಗಮನದಲ್ಲಿಟ್ಟುಕೊಂಡು ಭಕ್ತರಿಗೆ ಅನುಕೂಲವಾಗುವಂತೆ ದೇಗುಲದ ಗರ್ಭಗುಡಿ ಮುಂದಿನ ನೂತನ ಕಟ್ಟಡದ ವಿನ್ಯಾಸದಲ್ಲಿ ಅಲ್ಪ ಬದಲಾವಣೆ ವಿಚಾರವಾಗಿ ಅವರು ಮುಖ್ಯಮಂತ್ರಿ ಜೊತೆಗೆ ಚರ್ಚಿಸಲು ನಿರ್ಧರಿಸಿದ್ದಾರೆ. ದೇಗುಲದ ಗರ್ಭಗುಡಿ ಮುಂದಿನ ನೂತನ ಕಟ್ಟಡದ ವಿನ್ಯಾಸದಲ್ಲಿ ಅಲ್ಪ ಬದಲಾವಣೆ ಹಾಗು ಕಲ್ಲು ಮಂಟಪ ನಿರ್ಮಾಣದ ಬಗ್ಗೆಯೂ ಚರ್ಚೆ ನಡೆದಿದೆ. ಈ ಕುರಿತು ಡಿ.6ರ ಸಭೆಯಲ್ಲಿ ವಿಷಯ ಪ್ರಸ್ತಾಪವಾಗುವ ಸಾಧ್ಯತೆಗಳಿವೆ.

ಕಾರ್ಯಕರ್ತರಿಗೆ ಹುರುಪು

ಸ್ಥಳೀಯ ಸಂಸ್ಥೆ, ಗ್ರಾಮ ಪಂಚಾಯಿತಿ, ತಾಲ್ಲೂಕು ಹಾಗು ಜಿಲ್ಲಾ ಪಂಚಾಯಿತಿ ಚುನಾವಣೆಗೆ ಶೀಘ್ರದಲ್ಲೇ ಮುಹೂರ್ತಿ ನಿಗದಿಯಾಗಲಿರುವುದರಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಭೇಟಿ ಸಹಜವಾಗಿ ಕಾರ್ಯಕರ್ತರಲ್ಲಿ ಹುರುಪು ತರಿಸಿದೆ. ಜೆಡಿಎಸ್ ಭದ್ರಕೋಟೆ ಎನಿಸಿಕೊಂಡಿರುವ ಹಾಸನದಲ್ಲಿ ಕಾಂಗ್ರೆಸ್ ಬೇರು ಮಟ್ಟದಿಂದ ಸಂಘಟಿತವಾಗುತ್ತಿದೆ. ಒಂದು ವಿಧಾನಸಭಾ ಕ್ಷೇತ್ರ ಹಾಗು ಸಂಸದರನ್ನು ಹೊಂದಿರುವುದರಿಂದ 2028ರ ವಿಧಾನಸಭೆ ಚುನಾವಣೆಗೆ ಪಕ್ಷವನ್ನು ಮತ್ತಷ್ಟು ಬಲಪಡಿಸಲು ಸದ್ಯದ ಚುನಾವಣೆಗಳು ಮಹತ್ವದ್ದಾಗಿದೆ. ಹೀಗಾಗಿ ಮುಖ್ಯಮಂತ್ರಿ ಅವರು ವರ್ಷಾಂತ್ಯದಲ್ಲಿ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಸಮಾನತೆ ಸಂದೇಶ ಸಾರಿದ ಕನಕದಾಸರು: ಸಂಸದ ಶ್ರೇಯಸ್

• ಪ್ರಜೋದಯ ವರದಿ

ಅರಸೀಕೆರೆ: ಕನಕದಾಸರು ಸಮಾಜ ಜಾಗೃತಿ, ಸಮಾನತೆ ಮತ್ತು ನೈತಿಕ ಮೌಲ್ಯಗಳನ್ನು ಬಿತ್ತಿದ ಶ್ರೇಷ್ಠ ದಾರ್ಶನಿಕರು ಎಂದು ಸಂಸದ ಶ್ರೇಯಸ್ ಪಟೇಲ್ ಅವರು ಹೇಳಿದರು.

ನಗರದ ಹಳೇ ಸರ್ಕಾರಿ ಮಾಧ್ಯಮಿಕ ಶ

ನಾವೂ... ನಮ್ಮ ವೆಕೆಷನ್ನೂ...

ಒಂದೇ ಕಂಪನಿಯಲ್ಲಿ ಹಲವಾರು ವರ್ಷಗಳಿಂದ ಕುರ್ಚಿ ಗಟ್ಟಿ ಹಿಡಿದುಕೊಂಡು ಕುಳಿತುಕೊಂಡವರಿಗೆ ಒಂದು ಹೇಳಲಾಗದ ಮತ್ತು ಹಂಚಲಾಗದ ಅಳಲಿರುತ್ತದೆ. ಅದೇನೆಂದರೆ, ಅವರವರು ಗಳಿಸಿಕೊಂಡ ವೆಕೇಷನ್ ದಿನಗಳನ್ನು ಹೇಗೆ ಕಳೆಯೋದು ಎನ್ನುವುದು! ಒಂದಾ ನೊಂದು ಕಾಲದಲ್ಲಿ ಕಂಪನಿಗೆ ಸೇರಿದ ಮೊದಲ ದಿನಗಳಲ್ಲಿ ನಮಗೆಲ್ಲ ಕೇವಲ ಎರಡೇ ಎರಡು ವಾರಗಳ ಕಾಲ ರಜೆ ಇರೋದು. ಆಗೆಲ್ಲ ಭಾರತಕ್ಕೆ ಹೋಗಿ ಬರಬೇಕೆಂದರೆ, ಕಷ್ಟ ಪಟ್ಟು ವರ್ಷವಿಡೀ ಕೂಡಿಟ್ಟ ಮೂರು ವಾರಗಳ ರಜೆ ದಿನಗಳು ಯಾವ ಮೂಲೆಗೂ ಸಾಕಾಗುತ್ತಿರಲಿಲ್ಲ. ಹೋಗಿ ಬಂದು ಸುಧಾರಿಸಿಕೊಳ್ಳಲು ಒಂದು ವಾರ ಮುಗಿದು ಹೋಗುತ್ತಿತ್ತು. ಇನ್ನುಳಿದ ಎರಡು ವಾರಗಳಲ್ಲಿ ಏನನ್ನು ಮಾಡುವುದು, ಏನನ್ನು ಬಿಡುವುದು. ಕೊನೆಗೆ ವೆಕೇಷನ್ ಮುಗಿದ ಮೇಲೆ, ಎಷ್ಟೊಂದು ಸುಸ್ತಾಗಿರುತ್ತಿತ್ತೆಂದರೆ, ಭಾರತದ ಟ್ರಿಪ್ ನಂತರ ಮತ್ತೊಂದು ವೆಕೇಷನ್ ಬೇಕು ಎನ್ನುವಷ್ಟು.

ಆಗೆಲ್ಲ ರಜಾ ದಿನಗಳು ಕಡಿಮೆ, ನಮಗೆ ಹೆಚ್ಚು ಬೇಕಾಗಿತ್ತು. ಈಗೆಲ್ಲ ರಜೆ ದಿನಗಳು ಹೆಚ್ಚು, ನಾವು ಉಪಯೋಗಿಸಿದರೂ ಉಳಿದು ಮತ್ತೆ ಮುಂದಿನ ವರ್ಷಕ್ಕೆ ಹೋಗುವಷ್ಟು! ನನ್ನ ಹತ್ತಿರ ನಲವತ್ತು ದಿನಗಳ ರಜೆ ಇದೆ ಎಂದಾಕ್ಷಣ, ಎಲ್ಲವನ್ನೂ ಒಮ್ಮೆಯೇ ತೆಗೆದುಕೊಂಡು ಉಡಾಯಿಸಿ ಬಿಡುತ್ತೇನೆ ಎಂದು ಎಂಟು ವಾರಗಳ ಪ್ಲಾನ್ ಮಾಡುವುದಂತೂ ದೂರದ ಮಾತು! ಏನಾದರೂ ಎರಡು ವಾರಗಳ ರಜೆ ತೆಗೆದುಕೊಂಡರೆ ಓಕೆ, ಪರವಾಗಿಲ್ಲ... ಮೂರಕ್ಕಿಂತ ಹೆಚ್ಚು ತೆಗೆದು ಕೊಂಡರೆ, ವೆಕೇಷನ್ ಮುಗಿಸಿ ಆಫೀಸಿಗೆ ಬರಲೇ ಬೇಡ ಎಂದು ಮ್ಯಾನೇಜ್‌ಮೆಂಟ್‌ನವರು ಹೇಳಿದರೂ ಆಶ್ಚರ್ಯವೇನೂ ಇಲ್ಲ, ಹುಷಾರ್!

ಒಂಥರಾ ಹಲ್ಲಿದ್ದಾಗ ಕಡಲೆ ಇಲ್ಲ, ಕಡಲೆ ಇದ್ದಾಗ ಹಲ್ಲಿಲ್ಲ, ಎನ್ನುತ್ತಾರಲ್ಲ ಹಾಗೆ.

ನಮ್ಮ ಆಫೀಸಿನಲ್ಲಿ ಸಮ್ಮರ್ ಬಂತೆಂದರೆ ವೆಕೇಷನ್ನುಗಳ ಅಧಿಕೃತ ಆರಂಭವೆಂದೇ ಅರ್ಥ. ಮಾರ್ಚ್‌ಗೆ ಆರಂಭವಾಗುವ ಸ್ಪ್ರಿಂಗ್ ತನ್ನ ಆಗಮನದ ಜೊತೆಗೆ ಒಂದಿಷ್ಟು ಚಿಗುರುಗಳಲ್ಲಿ ಹುರುಪನ್ನು ಮೂಡಿಸುತ್ತದೆಯೇ ವಿನಾ ವಾತಾವರಣದ ಉಷ್ಣತೆ ಎಪ್ಪತ್ತು ಡಿಗ್ರಿ (ಫ್ಯಾರನ್‌ಹೈಟ್) ಮೇಲೆ ಏರಿ ಸುಯ್ ಎಂದು ತೀಡುವ ಮೃದುವಾದ ಗಾಳಿಯಿಂದ ರೋಮಾಂಚನವಾಗು ವುದರಿಂದ ಹಿಡಿದು ಸಾಕಪ್ಪಾ ಸಾಕು ಈ ಬಿಸಿಲು ಎನ್ನುವಷ್ಟರಲ್ಲಿ ಸಮ್ಮರ್ ಹೋಗೇ ಬಿಟ್ಟಿರುತ್ತದೆ. ಜೂನ್‌ನಿಂದ ಸೆಪ್ಟೆಂಬರ್ ವರೆಗೆ ಶಾಲೆಗಳಿಗೆ ರಜೆ, ಪೋಷಕರು ತಮ್ಮ ಮಕ್ಕಳನ್ನು ವರ್ಷಾವಧಿ ವೆಕೇಷನ್ನುಗಳಿಗೆ ಕೊಂಡೊಯ್ಯುವುದು ಕುಟುಂಬ ರೂಢಿ.

ನಾನು ನ್ಯೂ ಜೆರ್ಸಿಯಲ್ಲಿ ನೋಡಿರೋ ಹಾಗೆ ಅನಫಿಷಿಯಲ್ ಸಮ್ಮರ್ ಎಂದರೆ ಮೇ ತಿಂಗಳ ಕೊನೆಯಲ್ಲಿ ಬರುವ ಮೆಮೋರಿಯಲ್ ಡೇ ವೀಕ್ ಎಂಡ್‌ನಿಂದ ಆರಂಭವಾಗಿ ಸೆಪ್ಟೆಂಬರ್ ಮೊದಲ ವಾರದಲ್ಲಿ ಬರುವ ಲೇಬರ್ ಡೇ ವರೆಗೆ. ಜೂನ್-ಜುಲೈ-ಆಗಸ್ಟ್ ಇವೇ ಮೂರು ತಿಂಗಳು, ಅದೇನು ಕಡಿದು ಹಾಕುತ್ತೀರೋ ಬಿಡುತ್ತೀರೋ, ಇವೇ ವರ್ಷದ

ಉಳಿದ ಒಂಭತ್ತು ತಿಂಗಳನ್ನು ಸಹಿಸಿಕೊಳ್ಳುವಂತೆ, ಪ್ರತಿ ಸಮ್ಮರ್‌ನಲ್ಲಿ ಹೊಸದೇನನ್ನೋ ಸೃಷ್ಟಿಸುವಂತೆ ನಮ್ಮನ್ನೆಲ್ಲ ಕಟ್ಟಿ ಹಾಕಿರೋದು.

ಈಗಿನ ನಮ್ಮ ಸಮ್ಮರ್ ವೇಕೇಶನ್ ದಿನಗಳಲ್ಲಿ ನಾವು ಮನೆ ಹಿಂದಿನ ಡೆಕ್‌ನಲ್ಲಿ ಕಲ್ಲಿದ್ದಲನ್ನು ತುಂಬಿಸಿ ಗ್ರಿಲ್ ಹಚ್ಚುತ್ತೇವಲ್ಲ, ಅದಕ್ಕೂ ನಮ್ಮ ಕಾಲೇಜಿನ ದಿನಗಳಲ್ಲಿ ಇದ್ದಿಲು ಒಲೆಗೆ ಬೆಂಕಿ ತಗುಲಿಸಿ ನಳಪಾಕವನ್ನು ಬೇಯಿಸಿಕೊಳ್ಳುತ್ತಿದ್ದ ದಿನಗಳಿಗೂ ಹೆಚ್ಚು ವ್ಯತ್ಯಾಸವೇನೂ ಇಲ್ಲ ಎನ್ನಿಸುತ್ತದೆ. ವೆಜಿಟೇರಿಯನ್ನ್, ಜನ ನೀವೇನು ಗ್ರಿಲ್ ಮಾಡ್ತೀರಿ? ಎಂದು ಯಾರಾದರೂ ಕೇಳಿದರೆ, ಅವರು ವಿಸ್ಮಿತರಾಗುವ ಹಾಗೆ ನನ್ನ ವೆಜಿಟೇರಿಯನ್ನ್ ಗ್ರಿಲ್ಲಿಂಗ್ ಪುರಾಣವನ್ನೆಲ್ಲ ಹೊರಗೆ ತೆಗೆದಿಡುತ್ತೇನೆ. ಈ ಕಲ್ಲಿದ್ದಲು ಶಾಖ ಎಷ್ಟು ಜೋರು ಅಂದ್ರೆ ಸರಿಯಾಗಿ ಮ್ಯಾನೇಜ್ ಮಾಡಿದ್ರೆ ಒಂದು ದಿನದ ಊಟ-ವ್ಯವಸ್ಥೆಯನ್ನು ಈ ಗ್ರಿಲ್ ಒಲೆಯಲ್ಲೇ ಮಾಡಿಬಿಡಬಹುದು. ಅಮೇರಿಕನ್ ಊಟದ ಪದ್ಧತಿಯ ಹಾಗೆ ನಾವು ಒಂದಿಷ್ಟು ವೆಜಿಟೇರಿಯನ್ ಪ್ಯಾಟ್ಟಿಗಳು, ಉಪ್ಪು-ಹುಳಿ-ಖಾರ ಸವರಿದ ಗೊಂಜೋಳ, ಸ್ಕಿವರ್‌ಗೆ ಪೋಣಿಸಿದ ಥರಥರ ತರಕಾರಿಗಳು, ಚಿಪ್ಸ್ ಮುಳುಗಿಸಿ ತಿನ್ನಲಿಕ್ಕೆ ಮಾವಿನ ಹಣ್ಣಿನ ಚಟ್ನಿ (ಸಾಲ್ಸಾ), ಸವತೆಕಾಯಿ ತುಂಡುಗಳು, ಮಾವಿನ ಹಣ್ಣಿನ ರಸಾಯನ, ಮನೆಯಲ್ಲೇ ಮಾಡಿದ ಲಿಂಬೆ ಪಾನಕ (ಲೆಮನೇಡ್), ಹಲವು ಥರದ ಬ್ರೆಡ್ಡು, ಕೆಚಪ್, ಸುಟ್ಟ ಈರುಳ್ಳಿ ಮೊದಲಾದವುಗಳನ್ನು ನಮ್ಮ ಬ್ಯಾಕ್ ಯಾರ್ಡ್ ನಲ್ಲಿ ಹರಡಿಕೊಂಡು ವರ್ಷದ ಒಂದಿಷ್ಟು ದಿನಗಳು ಮನೆಯಲ್ಲೇ ನಾವು ಪಿಕ್‌ನಿಕ್ ಮಾಡೋದು ರೂಢಿ. ಇವುಗಳ ಜೊತೆಗೆ ಮೆಣಸಿನ ಕಾಯಿ ಬೋಂಡಾ, ಆಲೂಗಡ್ಡೆ ಬಜ್ಜಿ ಹಾಗೂ ಪಕ್ಕೋಡಾ ಸೇರಿಕೊಂಡು ನಮ್ಮ ಸಮ್ಮರ್ ಪಾರ್ಟಿಗಳನ್ನು ಯಶಸ್ವಿಯಾಗಿ ಮಾಡಿಬಿಡುತ್ತವೆ. ಸ್ವಿಚ್ ಒತ್ತಿ ಗ್ಯಾಸ್ ಗ್ರಿಲ್ ಮೇಲೆ ಒಂದೇ ಕ್ಷಣದಲ್ಲಿ ಬರ್ಗರ್‌ಗಳನ್ನು ಮಾಡುವುದಕ್ಕಿಂತ ಕಲ್ಲಿದ್ದಲ ಗ್ರಿಲ್ ಹೊತ್ತಿಸಿ ಅದಕ್ಕೆ ಗಾಳಿ ಬೀಸಿ ನಿಧಾನವಾಗಿ ಹೊತ್ತಿ ಉರಿಯುವ ಬೆಂಕಿಯಲ್ಲಿ ದಿನದ ಒಂದೆರಡು ಘಂಟೆ ಹೊರಗಿರುವುದು ಸುಖ ತರುತ್ತದೆ. ನಮ್ಮ ಅತಿಥಿಗಳ ಜೊತೆಗೆ ಹೆಚ್ಚು ಸಮಯವನ್ನು ಕಳೆಯುವ ಅವಕಾಶ ಹುಟ್ಟುತ್ತದೆ. ಗ್ಯಾಸ್ ಗ್ರಿಲ್‌ನಲ್ಲಿರುವ ಬಟನ್ ಒತ್ತಿದರೆ ಹತ್ತಿಕೊಳ್ಳುವ ಬೆಂಕಿಗೂ, ಕಲ್ಲಿದ್ದಲಿನಲ್ಲಿ ನಿಗಿನಿಗಿ ಕೆಂಡಗಳನ್ನು ಹೊರ ತರುವ ಪ್ರಯತ್ನಕ್ಕೂ ಬಹಳ ವ್ಯತ್ಯಾಸ ವಿದೆ. ನಾನು ಕಲ್ಲಿದ್ದಲಿನ ಒಲೆಯನ್ನು ಉಪಯೋಗಿಸಿದಾಗೆಲ್ಲ, ನಮ್ಮೂರಿನ ಡೋಬಿ ರಮೇಶಣ್ಣನಂತೂ ಖಂಡಿತ ನೆನೆಸಿಕೊಳ್ಳುತ್ತೇನೆ!

ಆದರೆ, ಮನೆಯ ಹಿಂದಿನ ಜಾಗದಲ್ಲಿ ಮಾಡಿ ಮುಗಿಸುವ ವೆಕೇಶನ್‌ಗೆ ಏನು ಅರ್ಥವಿದೆ ಹೇಳಿ? ಅನ್ನೋ ಪದದ ಸಹಾಯದಿಂದ ನಾವು ಖರ್ಚನ್ನಂತೂ ಕಡಿಮೆ ಮಾಡಿಕೊಳ್ಳಬಲ್ಲೆವು, ಆದರೆ ಇವು ಯಾವುದೂ ನಮ್ಮ ವೇಕೇಷನ್ನ್ ಅಲ್ಲವೇ ಅಲ್ಲ. ಬಾರ್ ಬೇಕ್ಯೂ ಏನಿದ್ದರೂ ವಾರಾಂತ್ಯದಲ್ಲಿ ನಾವು ಮನೆಯಿಂದ ಹೊರಗಿರುವ ಪ್ರಯತ್ನವಷ್ಟೇ. ಇನ್ನು ಎಲ್ಲರಂತೆ ಪಡೆದುಕೊಳ್ಳುವ ನಮ್ಮ ವೇಕೇಶನ್ನ್ ದಿನಗಳು ಎಲ್ಲಿಗೆ ಹೋಗುತ್ತವೆ, ಹೋಗಿಬಿಟ್ಟವು. ವರ್ಷಕ್ಕೆ ಒಂದೋ ಎರಡೋ ಬಾರಿ ಸಮುದ್ರ ಇನ್ನೂ ಇದೆಯೋ ಇಲ್ಲವೋ ಎಂದು ನೋಡಿಕೊಂಡು ಬರುವ ಹಾಗೆ ಬೀಚ್‌ಗೆ ಹೋಗುವುದು ವೇಕೇಷನ್ನ್ ಅಲ್ಲ. ಮುಂದಿನ ವರ್ಷ ನೋಡೋಣ ಎನ್ನುತ್ತಲೇ ಮುಂದೆ ತಳ್ಳುತ್ತ ಬಂದ ಡಿಸ್ನಿ ವರ್ಲ್ಡ್ ಮತ್ತು ಇತರ ಸ್ಥಳೀಯ ಆಕರ್ಷಣೆಗಳು ಇನ್ನೂ ದೂರ ಉಳಿಯುತ್ತವೆ. ನಮ್ಮ ಮನೆಯಿಂದ ಕೇವಲ ಮೂವತ್ತು ಮೈಲು ದೂರದ ನ್ಯೂ ಯಾರ್ಕ್ ನಗರವನ್ನು ನೋಡೋದು ಯಾವಾಗಲೋ ಒಂದು ಬಾರಿ, ಯಾರು ಹೋಗುತ್ತಾರೆ ಅಲ್ಲಿಗೆ, ಹಳ್ಳ-ಕೊಳ್ಳವನ್ನು ದಾಟಿ ಎನ್ನುವ ಉದಾಸೀನ ಗೆದ್ದು ಬಿಡುತ್ತದೆ. ಅಮೇರಿಕದ ನಮ್ಮ ಬದುಕಿನಲ್ಲಿ ಆಫೀಸಿನ ಕೆಲಸ ಕಾರ್ಯ ಹಾಗೂ ಅದರ ಸಂಬಂಧಿ ಯೋಚನೆಗಳನ್ನು ತೆಗೆದು ಹಾಕಿ ಬಿಟ್ಟರೆ ನಮ್ಮದು ಎಂದು ಉಳಿಯುವ ಭಾಗ ಬಹಳ ಕಡಿಮೆಯೇ ಎನ್ನಿಸಿ ಒಮ್ಮೆ ಭಯವಾಗುತ್ತದೆ.

ಹಿಂದೆ ಮದ್ರಾಸಿನಲ್ಲಿ ಕೆಲಸ ಮಾಡುವಾಗ ವಾರಕ್ಕೆರಡು ಮತ್ತು ತಿಂಗಳಿಗೆರಡು ಸಿಗುವ ರಜೆಗಳನ್ನು ಒಟ್ಟು ಪೋಣಿಸಿಕೊಂಡು ವಾರಗಟ್ಟಲೆ ಕರ್ನಾಟಕದಲ್ಲಿ ತಿರುಗಾಡಿದರೂ ಇನ್ನೂ ಮುಗಿಯದ ಕೆಲಸಗಳು ಹವ್ಯಾಸಗಳು ಅದೆಷ್ಟೋ ಇದ್ದವು. ಇನ್ನೂ ತಂತ್ರಜ್ಞಾನ ಇಷ್ಟು ಮುಂದು ವರಿಯದೆ ನಮ್ಮ ನಮ್ಮ ನಡುವೆ ಅಗಾಧ ದೂರಗಳಿದ್ದರೂ ಭೇಟಿಯಾಗಿ, ಮಾತನಾಡಿ, ಮುಟ್ಟಿ, ಹರಟಿ, ಹಾಡಿ, ಜಗಳವಾಡಿ ಮತ್ತೆ ಒಂದು ಗೂಡಿ, ಕುಣಿದು ಕುಪ್ಪಳಿಸುವ ಅನೇಕ ಚಟುವಟಿಕೆಗಳ ತುಡಿತವಿತ್ತು. ಬೇಕಾದಷ್ಟು ನೆಪಗಳಿದ್ದವು, ನೆನಪುಗಳಿದ್ದವು. ಸಾಕಷ್ಟು ಸಂಖ್ಯೆಯ ಗುರುತು-ಪರಿಚಯದವರಿದ್ದರು, ಸಂಬಂಧಿಗಳಿದ್ದರು. ತಿರುಗಲು ದೇವಸ್ಥಾನಗಳಿದ್ದವು, ಮರುಗುವ ಅವಕಾಶಗಳಿದ್ದವು, ಮನಸ್ಸುಗಳಿದ್ದವು. ವೇಕೇಶನ್ ದಿನಗಳ ಎಷ್ಟಿದ್ದರೂ ಸಾಲದು ಇನ್ನೂ ಬೇಕು ಎನ್ನುವ ತುಡಿತವಿತ್ತು. ಸಾಹಿತ್ಯವಿತ್ತು, ಸಂಗೀತವಿತ್ತು, ಸಿನಿಮಾಗಳಿದ್ದವು, ಪುಸ್ತಕಗಳಿದ್ದವು, ನಿಯತಕಾಲಿಕಗಳಿದ್ದವು. ಒಂದೂರಿನಿಂದ ಮತ್ತೊಂದು ಊರಿಗೆ ಹೋಗುವ ಮಾರ್ಗದಲ್ಲಿ ಓದಿ ಮುಗಿಸಿದ ಅದೆಷ್ಟೋ ಲಂಕೇಶ್, ಸುಧಾ, ತರಂಗ, ಮಯೂರ, ಉತ್ಥಾನ, ಮಲ್ಲಿಗೆ, ಪ್ರಜಾಮತ ದಂತಹ ವಾಹಿನಿಗಳಿದ್ದವು. ಊರಿಗೊಂದಿರುವ ಸಾರ್ವಜನಿಕ ಗ್ರಂಥಾಲಯಗಳಲ್ಲಿ ಬೇಂದ್ರೆ, ಭೈರಪ್ಪ, ತರಾಸು, ಕಾರಂತ, ಮಾಸ್ತಿ, ಕುವೆಂಪು ಮೊದಲಾದವುಗಳನ್ನು ಓದಿದ ಸ್ನೇಹಿತರ ಅನುಭವಗಳು ಅನಂತವಾಗಿ ಹಾಗೂ ಪುಕ್ಕಟೆಯಾಗಿ ಸಿಗುತ್ತಿದ್ದವು. ಇಂತಹ ಅಪರಿಮಿತ ಅನು ಭವಗಳನ್ನು ಪಠಿಸಿ-ಪ್ರವಚಿಸಿದ ಘಟಾನುಗಟಿಗಳ ಸಾರ ಸುಲಭವಾಗಿ ಸಿಗುತ್ತಿತ್ತು. ಹಲವಾರು ತತ್ವಗಳು ಸಿಗುತ್ತಿದ್ದವು-ಒಂದು ರೀತಿ ಬಯಲಿನಲ್ಲಿ ಮೇಯುವ ದನಕ್ಕೆ ಸಿಗುವ ಅವಕಾಶದ ಹಾಗೆ, ಅಂತಹ ಅಗಾಧವಾದ ಅನೇಕಾನೇಕ ಬಯಲುಗಳು ಮೇಯಲು ತೆರೆದಿದ್ದವು.

ಇವೆಲ್ಲದರ ಬಗ್ಗೆ ಈಗ ಬರೀತಾ ಹೋದರೆ ಅದು ಸವಿ ನೆನಪಾಗುತ್ತದೆ, ಅದರ ಮರುಘಳಿಗೆ ಅದು ನಾಸ್ಟಾಲ್ಜಿಯಾವಾಗಿ ಕಾಣುತ್ತದೆ. ಆದರೆ ಈವರೆಗೆ ಒಂದು ವಿಷಯವಂತೂ ಸತ್ಯ- ನಾವು, ನಮ್ಮ ವೇಕೇಷನ್ನುಗಳು, ನಮ್ಮ ದುಡಿಮೆ-ಇಡುಗಂಟು ಇವೆಲ್ಲದರ ಸಾಕ್ಷಾತ್ಕಾರ ಈ ಮೇಲಿನ ನಾಸ್ಟಾಲ್ಜಿಯಾ ದೊಂದಿಗೆ ಮಾತ್ರವೇ. ಅದನ್ನು ಹೊರತು ಪಡಿಸಿ, ಅಮೇರಿಕಾದಲ್ಲಿ ನಮ್ಮ ವೇಕೇಷನ್ನು ಗಳಿಗೆ ಪೂರ್ಣ ಅರ್ಥ ಬಂದಿದ್ದಿಲ್ಲ, ನಮ್ಮ ಆರ್ಥಿಕ ಪರಿಸ್ಥಿತಿ ಪರಿಪೂರ್ಣವಾ ದದ್ದಿಲ್ಲ. ನಿಜವಾಗಿಯೂ ನಮ್ಮತನವನ್ನು ಕಲಕಿ ನೋಡುವ ವೇಕೇಷನ್ನುಗಳು ಕೆಲವು ಪುಣ್ಯಾತ್ಮರಿಗೆ ವರ್ಷಕ್ಕೊಮ್ಮೆ ಬರುತ್ತವೆ, ಇನ್ನು ಕೆಲವು ನಮ್ಮಂಥಹವರಿಗೆ ಮೂರು-ನಾಲ್ಕು ವರ್ಷಕ್ಕೊಮ್ಮೆ ಕೂಡಿ ಬರುತ್ತದೆ. ಬರೀ ವಿದೇಶ ಪ್ರಯಾಣದ ಯೋಗವೊಂದಿದ್ದರೆ ಸಾಲದು, ಮತ್ತೆ ಮರಳಿ ಸ್ವದೇಶವನ್ನು ಆಗಾಗ್ಗೆ ನೋಡುವ ಯೋಗವೂ ಇರಬೇಕು ಎನ್ನುವ ಆಲೋಚನೆ ಬಂದಿದ್ದು ಇತ್ತೀಚೆಗೆ ಮಾತ್ರ.

ಒಂದು ಕಾಲದಲ್ಲಿ, ಕೇವಲ ಎರಡು ಭುಜಗಳಿದ್ದ ಮನಕ್ಕೆ ಇಂದು ಎಂಟು ರೆಕ್ಕೆಗಳಿವೆ, ಎಲ್ಲಿಗಾದರೂ ಹೋಗಬೇಕು ಬರಬೇಕು ಎಂದರೆ ಅದರ ಮುಂದಿನ ತಯಾರಿ ಮತ್ತು ಅದರ ನಂತರದ ಚಿಂತೆಗಳು ಅನಿವಾರ್ಯವಾಗುತ್ತವೆ. ಹಣ, ಹೆದರಿಕೆ ಎರಡೂ ಒಂದೇ ನಾಣ್ಯದ ಮುಖಗಳ ಹಾಗೆ ಒಂದನ್ನೊಂದು ಅನುಸರಿಸಿಕೊಂಡು ಬಂದಿವೆ-ಹಿಂದೆ ಹೆಗ್ಗೋಡಿನಿಂದ ಸಾಗರಕ್ಕೆ ನಿನಾಸಂ ನಾಟಕ ಮುಗಿಸಿ ನಡೆದುಕೊಂಡು ಬಂದಾಗ ಕತ್ತಲಿನ ದಾರಿಯಲ್ಲಿ ಹಾವಿದ್ದರೆ ಎನ್ನುವ ಹೆದರಿಕೆ ಇರಲಿಲ್ಲ, ಇಂದು ಕಾರಿನಲ್ಲಿ ಬೆಚ್ಚಗೆ ಕುಳಿತು ರಾತ್ರಿ ಡ್ರೈವ್ ಮಾಡುತ್ತಿದ್ದರೆ ರಸ್ತೆಯ ನಡುವೆ ಸಡನ್ ಆಗಿ ಜಿಂಕೆಗಳು ಬಂದರೆ ಎಂದು ಕಂಪನ ಶುರುವಾಗುತ್ತದೆ.

ವರ್ಷವಿಡೀ ದುಡಿದು ಇರುವ ಮೂರು ನಾಲ್ಕು ವಾರಗಳನ್ನು ಒಟ್ಟುಗೂಡಿಸಿ ಕೆಲವು ವರ್ಷಗಳಿಗೊಮ್ಮೆ ಮಾಡುವ ಸ್ವದೇಶ ಪ್ರಯಾಣ ತರುವ ಸುಖಕ್ಕಿಂತ ಹೆಚ್ಚು ಕೆಲಸವಾಗುತ್ತದೆ, ವೇಕೇಷನ್ನಿನ್ನಲ್ಲಿ ಎಲ್ಲರೂ ಎಣಿಸಿ ಖರ್ಚು ಮಾಡುವುದಕ್ಕಿಂತ ಹೆಚ್ಚೇ ಕಾಸು ಕಳಚಿ ಹೋಗುತ್ತದೆ. ನಮ್ಮನ್ನು ಭೇಟಿಯಾಗುವವರ ಅನೇಕಾನೇಕ ಮುಖಗಳು ಅವುಗಳ ಹಿಂದಿನ ಕಥನವನ್ನು ಮನಸ್ಸಿನಲ್ಲಿ ತೆರೆದುಕೊಳ್ಳುತ್ತವೆ. ನಮ್ಮ ನೆನಪಿನಲ್ಲಿರುವ ಹಾಗಿನ ಎಷ್ಟೋ ವ್ಯಕ್ತಿಗಳು ಇನ್ನೂ ಹರೆಯದವರಾಗಿರದೆ ಮುದುಕರಾಗಿರುವುದನ್ನು ಅಪ್‌ಡೇಟ್ ಮಾಡಿಕೊಳ್ಳಲು ವಿದುಳು ಹೆಣ ಗುತ್ತದೆ. ಇತ್ತೀಚೆಗೆ ಕೇಳಿರದ ಅನೇಕ ಪದ-ವಾಕ್ಯಗಳ ಬಳಕೆ ಬೆಚ್ಚಿ ಬೀಳಿಸುತ್ತದೆ. ಅಲ್ಲಲ್ಲಿ ಕೇಳಿ ಬರುವ ಸಿನಿಮಾ ಹಾಡುಗಳು ಹೊಸದಾಗೇ ಉಳಿಯುತ್ತವೆ. ಹುಟ್ಟಿದ ಹೊಸಬರು, ಸತ್ತ ಹಳೆ ಯವರನ್ನು ಕುಟುಂಬಗಳ ಹಿನ್ನೆಲೆಯಲ್ಲಿ ತಾಳೆ ಹಾಕಿಕೊಳ್ಳುವುದು ಮುಗಿಯದ ಲೆಕ್ಕವಾಗುತ್ತದೆ.

ಅಕಸ್ಮಾತ್ ಏನಾದ್ರೂ ಒಂದು ನಾಲ್ಕು ವಾರಗಳ ಧೀರ್ಘವಾದ ಭಾರತದ ಪ್ರಯಾಣವನ್ನೇ ನಾದರೂ ಮಾಡಿದರೆ, ನಾಲ್ಕು ವಾರ ವೆಕೆಷನ್ನಾ... ಎಂದು ಕೇಳಿ ಬರುವ ಉದ್ಗಾರಗಳಿಗೆ ಉತ್ತರವಾಗಿ ನಮ್ಮ ವೇಕೇಷನ್ನುಗಳ ಹಣೆಬರಹ ಇವರಿಗೇನು ಗೊತ್ತು! ಎನ್ನುವ ಹೇಳಿಕೆ ಮನ ದಲ್ಲೇ ಉಳಿದುಬಿಡುತದೆ. ವೇಕೇಷ 'ನ್ನಿಗೆ ಹೋಗುವುದಕ್ಕಿಂತ ಮೊದಲು ಹಾಗೂ ವೇಕೇಷನ್ನಿಂದ ಬಂದ ನಂತರ ಕೆಲಸಗಳು ಮಾತ್ರ ಅತಿಯಾಗಿ ಹೋಗುತ್ತವೆ. ಪ್ರತಿವರ್ಷ ಹೀಗೆ ಹೋಗಬೇಕು ಎನ್ನುವ ಆಸೆ, ಆಸೆಯಾಗಿಯೇ ಉಳಿದು ಕಣ್ಣು ಮುಚ್ಚಿ ತೆರೆಯುವುದರೊಳಗೆ ಮೂರು-ನಾಲ್ಕು ವರ್ಷಗಳಿಗೊಮ್ಮೆಯಾಗಿ ಬಿಡುತ್ತದೆ. ಇನ್ನು ಕೆಲವೇ ದಿನಗಳಲ್ಲಿ, ನಮ್ಮ ಕಂಪನಿಯವರು ಹೊಸದೊಂದು ಕಾನೂನನ್ನು ಜಾರಿಗೆ ತರುತ್ತಿದ್ದಾರೆ...ಯಾರೂ ತಮ್ಮ ವರ್ಷದ ವೇಕೇಷನ್ನಿನ ಒಂದೂವರೆ ಪಟ್ಟಿಗಿಂತ (ಅಂದರೆ 150%) ಹೆಚ್ಚು ಕ್ಯಾರಿ ಆನ್ ಮಾಡೋ ಹಾಗಿಲ್ಲ ಅಂತ. ಅಂದ್ರೆ, ನಾವು ಈ ವರ್ಷದ ಎಲ್ಲ ವೇಕೇಷನ್ ದಿನಗಳನ್ನು ಬಳಸಿದರೂ, ಹಿಂದಿನ ವರ್ಷದ ದಿನಗಳ ಬಾಕಿ ಹಾಗೇ ಇರುವ ಪರಿಸ್ಥಿತಿ ಬಂದಿದೆ ಎಂದರೆ? ನೀವೇನಾದರೂ ನನ್ನ ಹಾಗೆ, ಒಂದೇ ಕಂಪನಿಯಲ್ಲಿ 20 ವರ್ಷಕ್ಕಿಂತ ಹೆಚ್ಚು ದುಡಿದರೆ, ನಿಮಗೂ ಇದೇ ಪರಿಸ್ಥಿತಿ ಬಂದೀತು! ನೀವು ಕೂಡಿ, ಕಳೆದು, ಗುಣಿಸಿ, ಭಾಗಿಸಿ - ಏನು ಬೇಕಾದರೂ ಮಾಡಿ, ನಿಮ್ಮ ವೇಕೇಶನ್ ದಿನಗಳು ಕರಗಲೊಲ್ಲವು-ಒಂದು ರೀತಿ, ನಿಮ್ಮ ಸೊಂಟದ ಸುತ್ತಲಿನ ಬೊಜ್ಜಿನ ಹಾಗೆ. ಅಂದರೆ, ಮನುಷ್ಯನಲ್ಲಿ ಕೂಡಿಕೊಂಡಿರುವ ಬೊಜ್ಜು, ಅವರವರ ಕೊಬ್ಬಿನ ಮಟ್ಟ, ಹಾಗೂ ಅವರವರ ಬ್ಯಾಂಕ್ ಅಕೌಂಟುಗಳ ಬ್ಯಾಲೆನ್ಸಿಗೂ ಏನೋ ಒಂದು ಅವಿನಾಭಾವ ಸಂಬಂಧ ಇರಲೇ ಬೇಕು. ಇಲ್ಲದಿದ್ದರೆ ಇವೆಲ್ಲ ಒಂದೇ ರೀತಿ ಹೆಚ್ಚಾಗುವುದಾದರೂ ಹೇಗೆ? ವೇಕೇಶನ್ ಇರಲಿ ಇಲ್ಲದಿರಲಿ, ಒಂದು ಕಾಲದಲ್ಲಿ ಕಾಡು ಹರಟೆ, ಹಾಡು, ನಾಟಕಗಳ ಸುತ್ತ ಮುತ್ತ, ಯಕ್ಷಗಾನ -ತಾಳಮದ್ದಲೆಗಳ ಹಿಂದೆ ಮುಂದೆ, ಊರಿನಿಂದ ಊರಿಗೆ ತಿರುಗಿಕೊಂಡಿ ದ್ದಾಗ- ಆ ಜಗತ್ತು ಬಹಳ ದೊಡ್ಡ ದಿತ್ತು. ಅದು ಹೆಚ್ಚು ಜನರ ಒಡನಾಟದಿಂದ ಸಮೃದ್ಧಿಯಿಂದ ಕೂಡಿತ್ತು. ಈಗಿನ ಜಗತ್ತು ಚಿಕ್ಕದಾಗಿದೆ, ಅದರಲ್ಲಿ ಬಹಳ ಕಡಿಮೆ ಜನರ ಜೊತೆಗೆ ಹತ್ತಿರದ ಒಡನಾಟವಿದೆ ಎನ್ನುವುದು ಈ ಹೊತ್ತಿನ ತತ್ವ!

ನೀಲಿ ನೊಣಹಿಡುಕ ಹಕ್ಕಿ

ಇತ್ತೀಚೆಗೆ ಆಗಾಗ ವಾತಾವರಣದಲ್ಲಿ ಬದಲಾವಣೆಗಳಾಗುತ್ತಿದೆ. ಯಾವಾಗ ಮಳೆ ಬರುತ್ತದೋ, ಯಾವಾಗ ಬಿಸಿಲು ಕಾಯುತ್ತದೋ ಹೇಳುವುದು ಸ್ವಲ್ಪ ಕಷ್ಟ. ಬೆಳಗ್ಗೆ ಚಳಿಗಾಲ, ಮಧ್ಯಾಹ್ನ ಬೇಸಿಗೆಕಾಲ, ಸಂಜೆಯಾದರೆ ಮಳೆಗಾಲ ಹೀಗೆ ಒಂದೇ ದಿನದಲ್ಲಿ ಮೂರೂ ಕಾಲಗಳನ್ನು ನೋಡುವುದು ಸಾದ್ಯ. ಅಂತ ಕೆಲವರು ತಮಾಷೆಗೆ ಹೇಳುವುದನ್ನು ಕೇಳಿದ್ದೇನೆ. ಹತ್ತು ವರ್ಷದ ಹಿಂದೆ ಇದ್ದ ಹವಾಮಾನಕ

ದೆಹಲಿ: ರಸಗೊಬ್ಬರ ಹೆಸರಿನಲ್ಲಿ ಸ್ಫೋಟಕ ಸಂಗ್ರಹ

• ಪ್ರಜೋದಯ ವರದಿ

ಶ್ರೀನಗರ: ದೆಹಲಿ ಸ್ಫೋಟ ಮತ್ತು ಅಲ್ ಫಲಾಹ್ ವಿಶ್ವವಿದ್ಯಾಲಯದ ವೈಟ್ ಕಾಲರ್ ಭಯೋತ್ಪಾದನೆ ಪ್ರಕರಣ ಸಂಬಂಧ ಪೊಲೀಸರು ಬಂಧಿಸಿರುವ ಮೂವರು ವೈದ್ಯರ ಕಥೆ ವಿಭಿನ್ನವಾಗಿದೆ.

ಆರೋಪಿಗಳಾದ ಅಲ್ ಫಲಾಹ್ ವಿಶ್ವವಿದ್ಯಾಲಯದ ಡಾ॥ ಉಮರ್ ನಬಿ, ಡಾ॥ ಮುಜಮ್ಮಿಲ್ ಗನಿ ಮತ್ತು ಡಾ॥ ಶಾಹೀನ್ ಅವರು, ವಿವಿ ಕ್ಯಾಂಪಸ್‌ನ ಹೊರಗೆ ಇರುವ ಮೌಲ್ವಿ ಇಷ್ತಿಯಾಕ್‌ಗೆ ಸೇರಿದಮನೆಯಲ್ಲಿ ಬಾಡಿಗೆಗೆ ವಾಸವಿದ್ದರು.

ದೆಹಲಿ ಸ್ಫೋಟದ ನಂತರ ನಡೆದ ಕಾರ್ಯಾಚರಣೆ ವೇಳೆ ಈ ಮನೆಯಿಂದ ಅಮೋನಿಯಂ ನೈಟ್ರೇಟ್, ಪೊಟ್ಯಾಷಿಯಂ ಕ್ಲೋರೇಟ್, ಸಲ್ಫರ್ ಸೇರಿ 2,500 ಕೆ.ಜಿ.ಯಷ್ಟು ಸ್ಫೋಟಕ ಸಾಮಾಗ್ರಿಗಳನ್ನು ವಶಕ್ಕೆ ಪಡೆಯಲಾಗಿತ್ತು. ಹೀಗಾಗಿ ಆರೋಪಿಗಳ ಜೊತೆಗೆ ಕಟ್ಟಡ ಮಾಲೀಕ ಮೌಲ್ವಿ ಇಷ್ತಿಯಾಕ್‌ನನ್ನೂ ಪೊಲೀಸರು ಬಂಧಿಸಿದ್ದರು.

ಆದರೆ, ಆರೋಪಿಗಳು ಮನೆಯಲ್ಲಿ ರಸಗೊಬ್ಬರ ದಾಸ್ತಾನು ಇಡುವುದಾಗಿ ಹೇಳಿದ್ದರು. ಅದಕ್ಕೆ ಪ್ರತಿಯಾಗಿ ತಿಂಗಳಿಗೆ ಹೆಚ್ಚುವರಿಯಾಗಿ 2,500 ರೂ. ಬಾಡಿಗೆ

ಕೊಡಲು ಒಪ್ಪಿದ್ದರು. ತೀವ್ರ ಆರ್ಥಿಕ ಸಂಕಷ್ಟದಲ್ಲಿದ್ದ ನಾನು ಬಾಡಿಗೆ ಆಸೆಯಿಂದ ಒಪ್ಪಿದ್ದೆ ಎಂದು ಮೌಲ್ವಿ ಇಷ್ತಿಯಾಕ್ ವಿಚಾರಣೆ ವೇಳೆ ಪೊಲೀಸರ ಎದುರು ಹೇಳಿದ್ದಾರೆ.

ತನಗೆ ಸೇರಿದ ಮನೆಯಲ್ಲಿ ಅಪಾರ ಪ್ರಮಾಣದ ಸ್ಫೋಟಕ ಪತ್ತೆಯಾಗಿರುವುದರ ಗಂಭೀರ ತೆಗಿಂತಲೂ ಮೌಲ್ವಿ ಇಷ್ತಿಯಾಕ್‌ಗೆ ಬಾಕಿ ಉಳಿದಿರುವ ಬಾಡಿಗೆಯದ್ದೇ ಚಿಂತೆಯಾಗಿದೆ. ಈತನ ಕುಟುಂಬ ಬಡತನ ರೇಖೆಗಿಂತಲೂ ಕೆಳಗಿದ್ದು, ನಾಲ್ಕು ಮಕ್ಕಳ ಕುಟುಂಬವನ್ನು ಸಲಹಲು ಹೆಣ ಗಾಡುತ್ತಿರುವುದು ಪೊಲೀಸರ ಪ್ರಾಥಮಿಕ ತನಿಖೆಯಲ್ಲಿ ತಿಳಿದುಬಂದಿದೆ. 6 ತಿಂಗಳಿಂದ ಬಾಕಿ ಉಳಿಸಿರುವ ಬಾಡಿಗೆ ವಸೂಲಿ ಮಾಡಿ ಕೊಟ್ಟರೆ ಅದನ್ನು ತನ್ನ ಮನೆಗೆ ಕಳುಹಿಸುತ್ತೇನೆ, ಅದೇ ತನ್ನ ಕುಟುಂಬಕ್ಕೆ ದೊಡ್ಡ ಆಸರೆಯಾಗುತ್ತದೆ ಎನ್ನುವುದಾಗಿಯೂ ಆತ ರಾಷ್ಟ್ರೀಯ ತನಿಖಾ ಸಂಸ್ಥೆಯ ಅಧಿಕಾರಿಗಳ ಮುಂದೆ ಕೈಮುಗಿದು ಕೇಳಿಕೊಂಡಿದ್ದಾನೆಂದು ಮೂಲಗಳು ತಿಳಿಸಿವೆ.

ವೈಟ್‌ಕಾಲರ್ ಭಯೋತ್ಪಾದನೆ ಪ್ರಕರಣದಲ್ಲಿ ಪೊಲೀಸರು ಇದುವರೆಗೆ ಮೂವರು ವೈದ್ಯರೂ ಸೇರಿ 8 ಆರೋಪಿಗಳನ್ನು ಬಂಧಿಸಿದ್ದಾರೆ. ಮೌಲ್ವಿ ಇಷ್ತಿಯಾಕ್‌ನನ್ನು ಶೀಘ್ರವೇ ರಾಜ್ಯ ತನಿಖಾ ಸಂಸ್ಥೆಗೆ ಹಸ್ತಾಂತರಿಸಲಾಗುವುದು ಎಂದು ಮೂಲಗಳು ತಿಳಿಸಿವೆ.

2019ರಿಂದಲೇ ಸಿದ್ಧತೆ

ದೆಹಲಿ ಸ್ಫೋಟ ಪ್ರಕರಣದಲ್ಲಿ ಪೊಲೀಸರು ಬಂಧಿಸಿರುವ ಅಲ್ ಫಲಾಹ್ ವಿಶ್ವವಿದ್ಯಾಲಯದ ಡಾ॥ ಉಮರ್ ನಬಿ, ಡಾ॥ ಮುಜಮ್ಮಿಲ್ ಗನಿ ಮತ್ತು ಡಾ॥ ಶಾಹೀನ್ ಅವರು 2019ರಲ್ಲೇ ವೈಟ್‌ಕಾಲರ್ ಭಯೋತ್ಪಾದನೆಗೆ ಕಾರ್ಯಯೋಜನೆ ರೂಪಿಸಿದ್ದರು. ತಮ್ಮ ಚಟುವಟಿಕೆಗಳಿಗಾಗಿ ಸಾಮಾಜಿಕ ಜಾಲತಾಣಗಳನ್ನು ಆರೋಪಿಗಳು ಪರಿಣಾಮಕಾರಿಯಾಗಿ ಬಳಸಿಕೊಂಡಿರುವುದು ಪೊಲೀಸರ ವಿಚಾರಣೆ ವೇಳೆ ತಿಳಿದುಬಂದಿದೆ.

ಗಡಿಯಾಚೆಗಿನ ಭಯೋತ್ಪಾದನಾ ಕಾರ್ಯವಿಧಾನದಲ್ಲಿ ಬದಲಾವಣೆ ತಂದು ಉನ್ನತ ಶಿಕ್ಷಣ ಪಡೆದವರು ವೃತ್ತಿಪರರನ್ನು ಬಳಸಿಕೊಂಡು ಸಂಪೂರ್ಣ ಡಿಜಿಟಲ್ ವಿಧಾನದ ಮೂಲಕ ಗಡಿಯಾಚೆಯಿಂದಲೇ ಕಾರ್ಯನಿರ್ವಹಿಸುವ ವೈಟ್‌ಕಾಲರ್ ಭಯೋತ್ಪಾದನೆಯ ಹೊಸ ಮಾದರಿಯನ್ನು ಈ ತಂಡ ಹುಟ್ಟುಹಾಕಿತ್ತು. ತನಿಖೆಯ ಮುಂದುವರಿದ ಭಾಗವಾಗಿ ಅಲ್ ಫಲಾಹ್ ವಿಶ್ವವಿದ್ಯಾಲಯದ ವೈಟ್‌ಕಾಲರ್ ಭಯೋತ್ಪಾದನೆಗೂ ಪಾಕಿಸ್ತಾನಕ್ಕೂ ಇರುವ ನಂಟಿನ ಬಗ್ಗೆಯೂ ತನಿಖೆ ನಡೆಯುತ್ತಿದೆ. ವಿಶ್ವವಿದ್ಯಾಲಯದ ಉಪನ್ಯಾಸಕ ಡಾ. ಮುಜಮ್ಮಿಲ್ ಗನಿ, ಡಾ. ಆದಿಲ್ ಯಾಥರ್, ಡಾ.ಮುಜಾಫರ್ ಯಾಥರ್, ಡಾ॥ ಉಮರ್ ನಬಿ ಅವರು ಟೆಲಿಗ್ರಾಂ ಫೇಸ್‌ಬುಕ್ ಎಕ್ಸ್‌ಸೇರಿ ಸಾಮಾಜಿಕ ಜಾಲತಾಣಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಂಡಿರುವುದು ತನಿಖೆಯಿಂದ ತಿಳಿದುಬಂದಿದೆ. ಸುಧಾರಿತ ಸ್ಫೋಟಕ ಸಾಧನಗಳನ್ನು (ಐಇಡಿಎಸ್) ತಯಾರಿಸುವುದು ಹೇಗೆ ಎನ್ನುವುದರ ಕುರಿತು ಆರೋಪಿಗಳು ಯೂಟ್ಯೂಬ್‌ನಿಂದ ಮಾಹಿತಿ ಪಡೆದುಕೊಂಡಿದ್ದರು.

ಎಂಎಂಎ ಮಿಕ್ಸ್ ಮಾರ್ಷಲ್ ಆರ್ಟ್ಸ್: 4 ಚಿನ್ನದ ಪದಕ

• ಪ್ರಜೋದಯ ವರದಿ

ಸಕಲೇಶಪುರ: ಜೈಪುರದಲ್ಲಿ ನಡೆದ ಎಂಎಂಎ ಮಿಕ್ಸ್ ಮಾರ್ಷಲ್ ಆರ್ಟ್ಸ್ ರಾಷ್ಟ್ರೀಯ ಮಟ್ಟದ ಸ್ಪರ್ಧೆಯಲ್ಲಿ ತಾಲ್ಲೂಕಿನ ನಾಲ್ವರು ಯುವಕರು ಪಾಲ್ಗೊಂಡು ಚಿನ್ನದ ಪದಕಗಳನ್ನು ಗೆದ್ದು ಜಿಲ್ಲೆಯ ಕೀರ್ತಿಯನ್ನು ರಾಷ್ಟ್ರಮಟ್ಟದಲ್ಲಿ ಹೆಚ್ಚಿಸಿದ್ದಾರೆ ಎಂದು ಪುರಸಭೆಯ ಮಾಜಿ ಅಧ್ಯಕ್ಷ ಸಯ್ಯದ್ ಮುಫೀಜ್ ಹೇಳಿದರು.

ರಾಜಸ್ಥಾನದ ಜೈಪುರ ಸಂಸ್ಕಾರ್ ಸ್ಕೂಲ್‌ನಲ್ಲಿ ನಡೆದ ರಾಷ್ಟ್ರೀಯ ಮಟ್ಟದ ಎಂಎಂಎ ಮಿಕ್ಸ್ ಮಾರ್ಷಲ್ ಆರ್ಟ್ಸ್ ಸ್ಪರ್ಧೆಯಲ್ಲಿ ವಿಜೇತರಾದ ಯುವಕರನ್ನು ನಾಗರಿಕರ ಪರವಾಗಿ ಸನ್ಮಾನಿಸಿದ ನಂತರ ಮಾತನಾಡಿ, ತಾಲ್ಲೂಕಿನ ಉಮರ್ ಫಾರೂಕ್, ಮಹಮ್ಮದ್ ಆಸೀಫ್ ಮತ್ತು ಮಹಮ್ಮದ್ ಸಾಹಿಲ್ ತಮ್ಮ ಅದ್ಭುತ ಆಟದ ಮೂಲಕ ಚಿನ್ನದ ಪದಕಗಳನ್ನು ಪಡೆದು ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ ಎಂದು ಶ್ಲಾಘಿಸಿದರು.

ಈ ಯುವಕರು ರಾಷ್ಟ್ರಮಟ್ಟದ ಕ್ರೀಡೆಯಲ್ಲಿ ತಮ್ಮ ಸಾಮರ್ಥ್ಯವನ್ನು ತೋರಿಸಿ ತಾಲ್ಲೂಕು, ಜಿಲ್ಲೆ ಹಾಗೂ ರಾಜ್ಯದ ಹೆಮ್ಮೆಯನ್ನು ಹೆಚ್ಚಿಸಿದ್ದಾರೆ. ಅವರ ಭವಿಷ್ಯ ಉಜ್ವಲವಾಗಲಿ. ಮುಂದಿನ ಎಲ್ಲಾ ಸ್ಪರ್ಧೆಗಳಿಗೆ ಬೇಕಾ

ಗುವ ಸಹಾಯವನ್ನು ನನ್ನ ಕೈಲಾದ ಮಟ್ಟದಲ್ಲಿ ನೀಡುತ್ತೇನೆ. ಶೀಘ್ರ ದಲ್ಲೇ ಅಂತರರಾಷ್ಟ್ರೀಯ ಮಟ್ಟದಲ್ಲೂ ಸ್ಪರ್ಧಿಸಿ ದೇಶಕ್ಕೆ ಕೀರ್ತಿ ತರುತ್ತಾರೆ ಎಂದು ನಂಬಿದ್ದೇನೆಂದು ಹೇಳಿದರು.

ಚಿನ್ನದ ಪದಕ ವಿಜೇತ ಉಮರ್ ಫಾರೂಕ್ ಮಾತನಾಡಿ, ದೇಶದ ವಿವಿಧ ಭಾಗಗಳಿಂದ ಸುಮಾರು 250ಕ್ಕಿಂತ ಹೆಚ್ಚು ಸ್ಪರ್ಧಿಗಳು ಈ ಪಂದ್ಯಾವಳಿಯಲ್ಲಿ ಭಾಗವಹಿಸಿದ್ದರು. ರಾಜ್ಯದಿಂದ 40 ಮಂದಿ ಹಾಗೂ ನಮ್ಮ ಜಿಲ್ಲೆಯಿಂದ ನಾಲ್ವರು ಆಯ್ಕೆಯಾಗಿದ್ದೇವೆ. ಈ ಸಾಧನೆ ಮಾಡಲು ಸ್ನೇಹಿತರು, ಜಿಮ್ ಸಿಬ್ಬಂದಿ ಮತ್ತು ಕೋಚ್‌ಗಳ ಮಾರ್ಗದರ್ಶನ ಬಹುಮುಖ್ಯವಾಗಿದೆ. ಸಯ್ಯದ್ ಮುಫೀಜ್ ಸರ್‌ರಿಂದ ದೊರೆತ ಸನ್ಮಾನ ನಮ್ಮಲ್ಲಿ ಹೆಚ್ಚಿನ ಪ್ರೇರಣೆಯನ್ನು ತುಂಬಿದೆ ಎಂದರು.

ಪತ್ರಕರ್ತ ಮಲ್ನಾಡ್ ಮೆಹಬೂಬ್, ಜೈ ಭೀಮ್ ಮಂಜು ಅನೇಕರು ಉಪಸ್ಥಿತರಿದ್ದರು.

ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ

• ಪ್ರಜೋದಯ ವರದಿ

ಅರಕಲಗೂಡು: ತಾಲ್ಲೂಕಿನ ಹುಲಿಕಲ್ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಅಲ್ಲಾಪಟ್ಟನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅದ್ಧೂರಿಯಾಗಿ ಜರುಗಿತು.

ಕ್ಲಸ್ಟರ್ ವ್ಯಾಪ್ತಿಗೆ ಒಳಪಡುವ ಹುಲಿಕಲ್, ಕಣಿಯಾರು, ಬರಗೂರು, ಮಡಿಕೆ ಹೊಸಳ್ಳಿ, ಮುದಗನೂರು, ಎಡಿ ಕಾಲೂನಿ, ಹೆಗ್ಗಡಿಹಳ್ಳಿ ಗ್ರಾಮದ ಕಿರಿಯ, ಹಿರಿಯ ಪ್ರಾಥಮಿಕ ಶಾಲೆಗಳ ಮಕ್ಕಳು ತಮ್ಮ ಪ್ರತಿಭೆಗಳನ್ನು ಪ್ರದರ್ಶಿಸಿ ಶಿಕ್ಷಕರು, ಪೋಷಕರು ಹಾಗೂ ಗ್ರಾಮಸ್ಥ ರನ್ನು ಆಕರ್ಷಿಸಿದರು.

ಶಾಲೆಯ ಮುಖ್ಯ ಶಿಕ್ಷಕ ಎಸ್.ಪಿ. ಮಲ್ಲಿಕಾರ್ಜುನ ಅವರು ಮಾತನಾಡಿ, ಗ್ರಾಮೀಣ ಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲೆಗಳಲ್ಲಿನ ಮಕ್ಕಳು ರೈತರು, ಬಡಕುಟುಂಬದಿಂದ ಬಂದವರೇ ಆಗಿದ್ದಾರೆ. ಸರ್ಕಾರ ಅನುಷ್ಠಾನಕ್ಕೆ ತಂದಿರು ಪ್ರತಿಭಾ ಕಾರಂಜಿ ಕಾರ್ಯಕ್ರಮ ಈ ಮಕ್ಕಳಲ್ಲಿನ ಪ್ರತಿಭೆ ಅನಾವರಣಕ್ಕೆ ಸಹಕಾರಿಯಾಗಿದೆ. ಪೋಷಕರು ತಮ್ಮ ಮಕ್ಕಳಲ್ಲಿನ ಕಲೆಗಳನ್ನು ಪ್ರೋತ್ಸಾಹಿಸುವ ಉಧಾರತೆಯನ್ನು ಮೆರೆಯಬೇಕೆಂದು ಮನವಿ ಮಾಡಿದರು.

ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷೆ ರಂಜಿತಾ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಕ್ಕಳಿಗೆ ಶುಭಾಶಯ ಕೋರಿದರು.

ದ.ಆಫ್ರಿಕಾ ಸರಣಿಗೆ ರಾಹುಲ್ ನಾಯಕ

• ಪ್ರಜೋದಯ ವರದಿ

ನವದೆಹಲಿ: ಅನುಭವಿ ಬ್ಯಾಟರ್ ಕರ್ನಾಟಕದ ಕೆ.ಎಲ್.ರಾಹುಲ್ ಅವರು ದಕ್ಷಿಣ ಆಫ್ರಿಕಾ ವಿರುದ್ಧ ಮುಂಬರುವ ಮೂರು ಪಂದ್ಯಗಳ ಏಕದಿನ ಸರಣಿಯಲ್ಲಿ ಭಾರತ ತಂಡದ ನಾಯಕತ್ವ ವಹಿಸಲಿದ್ದಾರೆ. ಆಲ್ ರೌಂಡರ್ ರವೀಂದ್ರ ಜಡೇಜ ಅವರು ಎಂಟು ತಿಂಗಳ ನಂತರ ಏಕದಿನ ತಂಡಕ್ಕೆ ಮರಳಿದ್ದಾರೆ.

ಕತ್ತಿನ ಸ್ನಾಯುನೋವಿನಿಂದಾಗಿ ನಾಯಕ ಶುಭಮನ್ ಗಿಲ್ ಅವರು ಸರಣಿಗೆ ಅಲಭ್ಯರಾದ ಕಾರಣ ರಾಹುಲ್ ಅವರಿಗೆ ಸಾರಥ್ಯ ವಹಿಸಲಾಗಿದೆ. ದಕ್ಷಿಣ ಆಫ್ರಿಕಾ ವಿರುದ್ಧ ಕೋಲ್ಕತ್ತಾದಲ್ಲಿ ಮೊದಲ ಟೆಸ್ಟ್ ಪಂದ್ಯದ ವೇಳೆ ಅವರಿಗೆ ಕೊರಳಿಗೆ ನೋವು ಕಾಣಿಸಿಕೊಂಡಿತ್ತು.

ರಾಹುಲ್ ಅವರಿಗೆ ಈ ಸರಣಿಗೆ ಸೀಮಿತಗೊಳಿಸಿ ನಾಯಕತ್ವ ನೀಡಲಾಗಿದೆ. ಪಂತ್ ಅವರು ಕಳೆದೊಂದು ವರ್ಷದಲ್ಲಿ ಒಂದು ಏಕದಿನ ಪಂದ್ಯ ಮಾತ್ರ ಆಡಿದ್ದಾರೆ. ಶುಭಮನ್ ಗಿಲ್ ಅವರ ಕತ್ತು ನೋವು ಗುಣವಾಗಲಿದ್ದು, ನ್ಯೂಜಿಲೆಂಡ್ ವಿರುದ್ಧ 3 ಪಂದ್ಯಗಳ ಸರಣಿಗೆ (2026ರ ಜನವರಿ



ಯಲ್ಲಿ) ಅವರು ಮರಳುವ ನಿರೀಕ್ಷೆಯಲ್ಲಿ ಆಯ್ಕೆಗಾರರಿದ್ದಾರೆಂದು ಬಿಸಿಸಿಐ ಮೂಲವೊಂದು ಪಿಟಿಐಗೆ ತಿಳಿಸಿದೆ.

ಜಡೇಜ ಅವರು ನ್ಯೂಜಿಲೆಂಡ್ ವಿರುದ್ಧ ಚಾಂಪಿಯನ್ಸ್ ಟ್ರೋಫಿಯಲ್ಲಿ ಆಡಿದ ನಂತರ ಏಕದಿನ ತಂಡದಲ್ಲಿ ಆಡಿರಲಿಲ್ಲ. ಅಕ್ಷರ್ ಪಟೇಲ್ ಅವರಿಗೆ ವಿಶ್ರಾಂತಿ ನೀಡಿರುವ ಕಾರಣ ಜಡೇಜ ಹಾದಿ ಸುಗಮವಾಗಿದೆ.

ಸ್ಪಿನ್ ಆಲ್‌ರೌಂಡರ್ ಅಕ್ಷರ್ ಪಟೇಲ್ ಜೊತೆ ವೇಗದ ಬೌಲರ್‌ಗಳಾದ ಜಸ್‌ಪ್ರೀತ್ ಬೂಮ್ರಾ ಮತ್ತು ಮೊಹಮ್ಮದ್ ಸಿರಾಜ್ ಅವರಿಗೂ ವಿಶ್ರಾಂತಿ ನೀಡಲಾಗಿದೆ. ಕುಲದೀಪ್ ಯಾದವ್ ಮತ್ತು ವಾಷಿಂಗ್ಟನ್ ಸುಂದರ್ ಅವರು ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಯಶಸ್ವಿ ಜೈಸ್ವಾಲ್ ಅವರು ಈ ಹಿಂದೆ ಒಂದು ಏಕದಿನ ಪಂದ್ಯ ಮಾತ್ರ ಆಡಿದ್ದಾರೆ. ಆಸ್ಟ್ರೇಲಿಯಾ ವಿರುದ್ಧ ಏಕದಿನ ಸರಣಿ ಆಡಿದ್ದ ಅನುಭವಿಗಳಾದ ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮಾ ಅವರೂ ತಂಡದಲ್ಲಿದ್ದಾರೆ.

ಗಾಯಕವಾಡಗೆ ಅವಕಾಶ: ದಕ್ಷಿಣ ಆಫ್ರಿಕಾ ಎ ವಿರುದ್ಧ ಇತ್ತೀಚಿನ ಏಕದಿನ ಸರಣಿಯಲ್ಲಿ ಭಾರತ ಎ ತಂಡದ ಪರ ಸ್ಫೂರ್ತಿಯುತವಾಗಿ ಆಡಿದ ಋತುರಾಜ್ ಗಾಯಕವಾಡ ಅವರೂ ಅವಕಾಶ ಪಡೆದಿದ್ದಾರೆ. ಅವರು ಮೂರು ಪಂದ್ಯಗಳಲ್ಲಿ ಕ್ರಮವಾಗಿ 117, ಅಜೇಯ 68 ಮತ್ತು 25 ರನ್ ಬಾರಿಸಿದ್ದರು.

ಉಪನಾಯಕ ಶ್ರೇಯಸ್ ಅಯ್ಯರ್ ಅವರು ಗಾಯದಿಂದ ಚೇತರಿಸಿಕೊಳ್ಳುತ್ತಿರುವ ಕಾರಣ ಗಾಯಕವಾಡ ಅವಕಾಶ ಪಡೆದಿದ್ದಾರೆ. ಅವರು ಇದುವರೆಗೆ ಆರು ಏಕದಿನ ಪಂದ್ಯಗಳಲ್ಲಿ ಆಡಿದ್ದು, 2023ರಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಗೆಬ್ಹೆರಾದಲ್ಲಿ ಕೊನೆಯ ಬಾರಿ ಆಡಿದ್ದರು.

ಏಕದಿನ ಸರಣಿ ವೇಳಾಪಟ್ಟಿ

ನ.30 ಮೊದಲ ಪಂದ್ಯ, ರಾಂಚಿ
ಡಿ.3 ಎರಡನೇ ಪಂದ್ಯ, ರಾಯಪುರ
ಡಿ.6 ಮೂರನೇ ಪಂದ್ಯ, ವಿಶಾಖಪಟ್ಟಣ

ಭಾರತ ತಂಡ ಇಂತಿದೆ

ರೋಹಿತ್ ಶರ್ಮಾ, ಯಶಸ್ವಿ ಜೈಸ್ವಾಲ್, ವಿರಾಟ್ ಕೊಹ್ಲಿ, ತಿಲಕ್ ವರ್ಮಾ, ಕೆ.ಎಲ್.ರಾಹುಲ್ (ನಾಯಕ), ರಿಷಭ್ ಪಂತ್, ವಾಷಿಂಗ್ಟನ್ ಸುಂದರ್, ರವೀಂದ್ರ ಜಡೇಜ, ಕುಲದೀಪ್ ಯಾದವ್, ನಿತೀಶ್ ಕುಮಾರ್ ರೆಡ್ಡಿ, ಹರ್ಷಿತ್ ರಾಣಾ, ಋತುರಾಜ್ ಗಾಯಕವಾಡ, ಪ್ರಸಿದ್ಧ ಕೃಷ್ಣ, ಅರ್ಷದೀಪ್ ಸಿಂಗ್ ಮತ್ತು ಧ್ರುವ್ ಜುರೇಲ್.

ದ.ಆಫ್ರಿಕಾ 489ಕ್ಕೆ ಆಲೌಟ್: ಕುಲ್‌ದೀಪ್‌ಗೆ 4 ವಿಕೆಟ್

• ಪ್ರಜೋದಯ ವರದಿ

ಗುವಾಹಟಿ: ಇಲ್ಲಿ ನಡೆಯುತ್ತಿರುವ ಭಾರತ ವಿರುದ್ಧದ 2ನೇ ಟೆಸ್ಟ್ ಕ್ರಿಕೆಟ್ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ದಕ್ಷಿಣ ಆಫ್ರಿಕಾವು 489 ರನ್‌ಗಳ ಬೃಹತ್ ಮೊತ್ತ ಕಲೆ ಹಾಕಿದೆ. ಎರಡನೇ ದಿನದಾಟದ ಮೂರನೇ ಸೆಷನ್‌ನಲ್ಲಿ ಆಫ್ರಿಕಾ ತಂಡ ಆಲೌಟ್ ಆಗಿದೆ.

ಅಗ್ರ ಕ್ರಮಾಂಕದ ಎಲ್ಲಾ ಬ್ಯಾಟರ್‌ಗಳು ಸ್ಥಿರ ಪ್ರದರ್ಶನ ನೀಡಿದ್ದರಿಂದ ದಕ್ಷಿಣ ಆಫ್ರಿಕಾ ಬೃಹತ್ ಮೊತ್ತ ಕಲೆಹಾಕಲು ಸಾಧ್ಯವಾಯಿತು. ಮಧ್ಯಮ ಕ್ರಮಾಂಕದ ಸೆನುರನ್ ಮುತ್ತುಸಾಮಿ ಶತಕ(109) ಸಿಡಿಸಿದರೆ, ಬಿರುಸಿನ ಬ್ಯಾಟಿಂಗ್ ಮಾಡಿದ ಮಾರ್ಕೊ ಜಾನ್‌ಸೆನ್ 93 ರನ್ ಸಿಡಿಸಿ ತಂಡಕ್ಕೆ ಉಪಯುಕ್ತ ಕಾಣಿಕೆ ನೀಡಿದರು.

ಉಳಿದಂತೆ ಮರ್ಕರಂ(38), ರ್‍ಯಾನ್ ರಿಕಲ್ಟನ್ (35), ಟ್ರಿಸ್ಟನ್ ಸ್ಟಬ್ಸ್(49), ನಾಯಕ ತೆಂಬಾ ಬವುಮಾ(41) ತಂಡಕ್ಕೆ ನೆರವಾದರು.

ಭಾರತದ ಪರ ಕುಲ್ದೀಪ್ ಯಾದವ್ 115 ರನ್ ನೀಡಿ 4 ವಿಕೆಟ್

ಉರುಳಿಸಿದರೆ, ಜಸ್‌ಪ್ರೀತ್ ಬೂಮ್ರಾ, ಮೊಹಮ್ಮದ್ ಸಿರಾಜ್, ರವೀಂದ್ರ ಜಡೇಜಾ ತಲಾ 2 ವಿಕೆಟ್ ಪಡೆದರು.

ಮೊದಲ ಇನಿಂಗ್ಸ್ ಬ್ಯಾಟಿಂಗ್ ಆರಂಭಿಸಿರುವ ಭಾರತ ತಂಡ ಎರಡನೇ ದಿನದಾಟದಂತ್ಯಕ್ಕೆ ವಿಕೆಟ್ ನಷ್ಟವಿಲ್ಲದೆ 9 ರನ್ ಗಳಿಸಿದೆ. 7 ರನ್ ಗಳಿಸಿರುವ ಯಶಸ್ವಿ ಜೈಸ್ವಾಲ್ ಮತ್ತು 2 ರನ್ ಗಳಿಸಿರುವ ಕೆ.ಎಲ್.ರಾಹುಲ್ ಸೋಮವಾರಕ್ಕೆ ಬ್ಯಾಟಿಂಗ್ ಕಾಯ್ದುಕೊಂಡಿದ್ದಾರೆ.

ಪ್ರತಿಭಾ ಕಾರಂಜಿ ಮಕ್ಕಳ ಪ್ರತಿಭೆ ಗುರುತಿಸುವ ವೇದಿಕೆ

• ಪ್ರಜೋದಯ ವರದಿ

ಚನ್ನರಾಯಪಟ್ಟಣ: ಪ್ರತಿಭಾ ಕಾರಂಜಿಯು ಮಕ್ಕಳಲ್ಲಿರುವ ಪ್ರತಿಭೆ ಗುರುತಿಸಿ ಮುಖ್ಯ ಭೂಮಿಕೆಗೆ ತರುವ ವೇದಿಕೆಯೆಂದು ಹಿರೀಸಾವೆ ಹೋಬಳಿ ಶಿಕ್ಷಣ ಸಂಯೋಜಕ ಎಸ್. ಶ್ರೀನಿವಾಸ್ ಅವರು ಹೇಳಿದರು.

ತಾಲ್ಲೂಕಿನ ಜಿನ್ನೇನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಉದ್ಘಾಟಿಸಿ ಮಾತನಾಡಿ, ಕಲೆ ಎಂಬುದು ಯಾರ ಸ್ವತ್ತಲ್ಲ. ತಮ್ಮಲ್ಲಿರುವ ಕಲೆ ಹಾಗು ಪ್ರತಿಭೆಯನ್ನು ಹೊರ ಜಗತ್ತಿಗೆ ಪ್ರದರ್ಶಿಸದೆ ತಮ್ಮೊಳಗೆ ಇಟ್ಟುಕೊಂಡರೆ ಅದು ಅಲ್ಲಿಯೇ ನಶಿಸಿ ಹೋಗುತ್ತದೆ. ಅದನ್ನು ಸುಲಭವಾಗಿ ಕ್ಷೀಣಿಸಲು ಅಥವಾ ನಶಿಸಲು ಬಿಡಬಾರದು. ಸಮಯ ಸಿಕ್ಕಾಗ ಸದುಪಯೋಗ ಪಡಿಸಿಕೊಂಡು ಯಶಸ್ವಿಗೊಳಿಸಬೇಕೆಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಟಿವಿ ವೀಕ್ಷಣೆ ಹಾಗು ಮೊಬೈಲ್ ಬಳಕೆಯಿಂದ ದೂರ ಸರಿದು, ತಮಗೆ ಯಾವ ಕ್ಷೇತ್ರದ ಮೇಲೆ ಆಸಕ್ತಿ ಇದೆಯೋ ಅತ್ತ ಮುಖ ಮಾಡಿ ಸಹನೆ, ಶ್ರದ್ಧೆ ಹಾಗು ಭಕ್ತಿಯೊಂದಿಗೆ ನಡೆದರೆ ಸಾಧನೆಯ ಗುರಿಯನ್ನು ಸುಲಭವಾಗಿ ತಲುಪಬಹುದೆಂದರು.

ಎಸ್‌ಡಿಎಂಸಿಅಧ್ಯಕ್ಷ ಬೊಮ್ಮೇಗೌಡ ಅವರು ಮಾತನಾಡಿ, ಗ್ರಾಮೀಣ ಭಾಗದ ಅದೆಷ್ಟೋ ಮಂದಿ ಪ್ರತಿಭಾನ್ವಿತರು ಸಾಹಿತ್ಯ, ರಂಗಭೂಮಿ ಹಾಗು ಸಿನಿಮಾ ಕ್ಷೇತ್ರಗಳಲ್ಲಿ ತಮ್ಮೊಳಗಿನ ಪ್ರತಿಭೆ ಪ್ರದರ್ಶಿಸಿ ಹೆಸರು ಮಾಡಿರುವುದು ಹೆಮ್ಮೆಯ ಸಂಗತಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕ್ಲಸ್ಟರ್ ವ

ಕಾಂಗ್ರೆಸ್ ಜಟಾಪಟಿಗೆ ತಾತ್ಕಾಲಿಕ ಬ್ರೇಕ್

• ಪ್ರಜೋದಯ ವರದಿ

ಬೆಂಗಳೂರು : ರಾಜ್ಯ ಕಾಂಗ್ರೆಸ್‌ನ ಅಧಿಕಾರ ಹಂಚಿಕೆಯ ಜಟಾಪಟಿಗೆ ತಾತ್ಕಾಲಿಕವಾಗಿ ಬ್ರೇಕ್ ಬಿದ್ದಿದ್ದು, ಮುಂದಿನ ವಾರ ರಾಹುಲ್ ಗಾಂಧಿಯವರ ಸಮ್ಮುಖದಲ್ಲಿ ಎಲ್ಲವೂ ಇತ್ಯರ್ಥವಾಗಲಿದೆ.

ಬೆಂಗಳೂರಿನಲ್ಲಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ರಾಹುಲ್ ಗಾಂಧಿಯವರ ಸಮ್ಮುಖದಲ್ಲಿ ಅಧಿಕಾರ ಹಂಚಿಕೆಯ ಕಗ್ಗಂಟ್ಟಿಗೆ ಪರಿಹಾರ ದೊರಕಿಸುವ ಭರವಸೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬಣದವರಿಗೆ ನೀಡಿದ್ದು, ವಿದೇಶ ಪ್ರವಾಸದಲ್ಲಿರುವ ರಾಹುಲ್‌ಗಾಂಧಿ ದೆಹಲಿಗೆ ಮರಳಿದ ನಂತರ ಅಧಿಕಾರ ಹಂಚಿಕೆಯ ಕಗ್ಗಂಟ್ಟಿಗೆ ಪರಿಹಾರ ಸಿಗಲಿದೆ.

ರಾಹುಲ್‌ಗಾಂಧಿಯವರ ವಿದೇಶ ಪ್ರವಾಸದಿಂದ ಈ ತಿಂಗಳ 26 ರಂದು ನವದೆಹಲಿಗೆ ವಾಪಸ್ಸಾಗಲಿದ್ದು, 28 ರಂದು ರಾಜ್ಯ ಕಾಂಗ್ರೆಸ್‌ನ ಅಧಿಕಾರ ಹಂಚಿಕೆಯ ಕಗ್ಗಂಟ್ಟಿಗೆ ಪರಿಹಾರ ದೊರಕಿಸುವ ಸಭೆ ನವದೆಹಲಿಯಲ್ಲಿ ನಡೆಯಲಿದೆ.

ಈ ಸಭೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಬ್ಬರನ್ನು ಆಹ್ವಾನಿಸಿ ಮುಖಾಮುಖಿಯಾಗಿ ಕುಳ್ಳಿರಿಸಿ ಅಧಿಕಾರ ಹಂಚಿಕೆಯ

ಬಿಕ್ಕಟ್ಟಿಗೆ ಹೈಕಮಾಂಡ್ ಪರಿಹಾರ ಸೂತ್ರ ಪ್ರಕಟಿಸಲಿದೆ ಎಂದು ಕಾಂಗ್ರೆಸ್‌ನ ಉನ್ನತ ಮೂಲಗಳು ಹೇಳಿವೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಕಳೆದ 2 ದಿನಗಳಿಂದ ಬೆಂಗಳೂರಿನಲ್ಲೇ ಮೊಕ್ಕಾಂ ಹೂಡಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮುಖ್ಯಮಂತ್ರಿ ಸಿದ್ದರಾಮಯ್ಯ ಈ ಇಬ್ಬರು ನಾಯಕರನ್ನು ತಮ್ಮ ನಿವಾಸಕ್ಕೆ ಕರೆಸಿ ಚರ್ಚೆ ನಡೆಸಿದ್ದು, ರಾಹುಲ್‌ಗಾಂಧಿಯವರ ಸಮ್ಮುಖದಲ್ಲೇ ಎಲ್ಲವನ್ನು ಇತ್ಯರ್ಥ ಪಡಿಸಿಕೊಳ್ಳೋಣ. ಅಲ್ಲಿಯವರೆಗೂ ಕಾಯಿರಿ ಎಂಬ ಸೂಚನೆ ನೀಡಿದ್ದು, ಅದಕ್ಕೆ ಈ ಇಬ್ಬರು ನಾಯಕರು ಸಮ್ಮತಿಸಿದ್ದಾರೆ. ಹಾಗಾಗಿ ತಾರಕಕ್ಕೇರಿದ್ದ ಅಧಿಕಾರ ಹಂಚಿಕೆಯ ಸಮರಕ್ಕೆ ಈಗ ತಾತ್ಕಾಲಿಕ ತೆರೆ ಬಿದ್ದಿದೆ.

ಎಐಸಿಸಿ ಅಧ್ಯಕ್ಷರಾಗಿರುವ ಮಲ್ಲಿಕಾರ್ಜುನ ಖರ್ಗೆಯವರು ನಾಳೆ ರಾತ್ರಿ ನವದೆಹಲಿಗೆ ತೆರಳಲಿದ್ದು, ಬುಧವಾರ ರಾಹುಲ್‌ಗಾಂಧಿಯವರನ್ನು ಭೇಟಿ ಮಾಡಿ ರಾಜ್ಯ ಕಾಂಗ್ರೆಸ್‌ನ ಬಿಕ್ಕಟ್ಟು ನಿವಾರಣೆಗೆ ಸಭೆಯನ್ನು ನಿಗದಿ ಮಾಡಲಿದ್ದಾರೆ.

ಬಹುತೇಕ ನ.28 ರಂದು ರಾಹುಲ್ ಗಾಂಧಿಯವರ ನಿವಾಸದಲ್ಲಿ ಈ ಸಭೆ ನಡೆಯಲಿದೆ ಎಂದು ಕಾಂಗ್ರೆಸ್ ಮೂಲಗಳು ಹೇಳಿವೆ. ಈ ಸಭೆಯಲ್ಲೇ ಅಧಿಕಾರ ಹಂಚಿಕೆಯ ಬಿಕ್ಕಟ್ಟಿಗೆ ಪರಿಹಾರವನ್ನು ಕಂಡುಕೊಳ್ಳಲಾಗುವುದು. ಈ ಬಿಕ್ಕಟ್ಟನ್ನು ಮತ್ತಷ್ಟು ವಿಳಂಬ ಮಾಡುವುದರಿಂದ ಪಕ್ಷ ಮತ್ತು ಸರ್ಕಾರಕ್ಕೆ ಹಾನಿಯಾಗುತ್ತದೆ ಎಂಬುದು ಹೈಕಮಾಂಡ್‌ಗೆ ಮನವರಿಕೆಯಾಗಿದೆ. ಹಾಗಾಗಿ ಮುಂದಿನ ವಾರವೇ ರಾಜ್ಯ ಕಾಂಗ್ರೆಸ್‌ನ ಅಧಿಕಾರ ಹಂಚಿಕೆಯ ಜಟಾಪಟಿಗೆ ಒಂದು ಪರಿಹಾರವನ್ನು ಹೈಕಮಾಂಡ್ ಕಂಡು ಕೊಳ್ಳಲಿದೆ ಎಂದು ಹೇಳಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಬ್ಬರ ಸಮ್ಮುಖದಲ್ಲೇ ಚರ್ಚೆಗಳನ್ನು ನಡೆಸಿ ಬಿಕ್ಕಟ್ಟಿಗೆ ಪರಿಹಾರ ಸೂತ್ರವನ್ನು ಹೈಕಮಾಂಡ್ ಪ್ರಕಟಿಸಲಿದೆ.

ಈಗಾಗಲೇ ಇಬ್ಬರು ನಾಯಕರು ಹೈಕಮಾಂಡ್ ಕೈಗೊಳ್ಳುವ ತೀರ್ಮಾನಕ್ಕೆ ನಾವೆಲ್ಲರೂ ಬದ್ಧ ಎಂದು ಹೇಳಿರುವುದರಿಂದ ಹೈಕಮಾಂಡ್ ಯಾವ ತೀರ್ಮಾನ ಕೈಗೊಂಡರೂ ಅದನ್ನು ಒಪ್ಪಿಕೊಳ್ಳಲೇಬೇಕಾದ ಅನಿವಾರ್ಯತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಇದೆ.

ಕಾಂಗ್ರೆಸ್ ಹೈಕಮಾಂಡ್ ರಾಜ್ಯ ಕಾಂಗ್ರೆಸ್‌ನ ವಿದ್ಯಮಾನಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದು, ತಮ್ಮದೇ ಆದ ಮೂಲಗಳಿಂದ ಮಾಹಿತಿಯನ್ನು ಪಡೆದುಕೊಂಡಿದ್ದು, ಪಕ್ಷ ಹಾಗೂ ಸರ್ಕಾರದ ಹಿತದೃಷ್ಟಿಯಿಂದ ಒಂದು ತೀರ್ಮಾನ ಮಾಡಲಿದೆ.

ಹೈಕಮಾಂಡ್ ತೀರ್ಮಾನ ಯಾರ ಪರ ಇರಲಿದೆ ಎಂಬುದು ಕುತೂಹಲ ಮೂಡಿಸಿದ್ದು, ಸದ್ಯಕ್ಕೆ ಹೈಕಮಾಂಡ್ ಪರಿಹಾರ ಸೂತ್ರದ ಗುಟ್ಟು ಎಲ್ಲೂ ರಟ್ಟಾಗಿಲ್ಲ. ರಾಹುಲ್‌ಗಾಂಧಿಯವರು ವಿದೇಶದಿಂದ ಬಂದ ನಂತರ ಅಧಿಕಾರ ಹಂಚಿಕೆಯ ಬಿಕ್ಕಟ್ಟಿಗೆ ಯಾವ ಪರಿಹಾರವನ್ನು ಹೈಕಮಾಂಡ್ ನೀಡಲಿದೆ ಎಂಬುದು ಬಹಿರಂಗವಾಗಲಿದೆ. ಅಲ್ಲಿಯವರೆಗೂ ರಾಜ್ಯದಲ್ಲಿ ಕೆಲ ದಿನಗಳಿಂದ ನಡೆದಿದ್ದ ಬಣ ರಾಜಕೀಯ, ರಹಸ್ಯ ಸಭೆ, ಚರ್ಚೆ ಎಲ್ಲದಕ್ಕೂ ತೆರೆ ಬಿದ್ದಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಿನ್ನೆ ರಾತ್ರಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರನ್ನು ಭೇಟಿ ಮಾಡಿ ಅಧಿಕಾರ ಹಂಚಿಕೆಯ ಗೊಂದಲಗಳಿಗೆ ತೆರೆ ಎಳೆಯುವಂತೆ ಮನವಿ ಮಾಡಿದ್ದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಹ ಭಾನುವಾರ ರಾತ್ರಿಯೇ ಖರ್ಗೆಯವರನ್ನು ಭೇಟಿ ಮಾಡಿ ಚರ್ಚೆ ನಡೆಸಿದ್ದರು. ಜತೆಗೆ ಹಲವು ಶಾಸಕರು, ಮುಖಂಡರು ಸಹ ಖರ್ಗೆಯವರನ್ನು ಭೇಟಿ ಮಾಡಿದ್ದರು.

ಎಲ್ಲರ ಜೊತೆ ಸುದೀರ್ಘವಾಗಿ ಮಾತನಾಡಿರುವ ಖರ್ಗೆಯವರು ವಸ್ತುಸ್ಥಿತಿಯ ವರದಿಯನ್ನು ರಾಹುಲ್‌ಗಾಂಧಿಯವರಿಗೆ ಕಳುಹಿಸಲಿದ್ದು, ಆ ವರದಿ ಆಧರಿಸಿ ರಾಹುಲ್‌ಗಾಂಧಿಯವರು ಸೂಕ್ತ ತೀರ್ಮಾನ ಪ್ರಕಟಿಸುವರು.

ರಾಹುಲ್‌ಗಾಂಧಿಯವರ ತೀರ್ಮಾನ ಹೊರ ಬೀಳುವುದು ನವೆಂಬರ್ 28ರ ನಂತರವೇ. ಅಲ್ಲಿಯವರೆಗೂ ರಾಜ್ಯ ಕಾಂಗ್ರೆಸ್‌ನಲ್ಲಿ ಕದನ ವಿರಾಮ ಇರಲಿದೆ. ರಾಹುಲ್ ಗಾಂಧಿಯವರ ತೀರ್ಮಾನದ ಮೇಲೆ ಮುಂದಿನ ರಾಜಕೀಯ ವಿದ್ಯಮಾನಗಳು ನಿಂತಿರುವುದರಿಂದ ರಾಹುಲ್‌ಗಾಂಧಿಯವರ ತೀರ್ಮಾನ ಏನಿರಲಿದೆ ಎಂಬುದರತ್ತ ಎಲ್ಲರ ಚಿತ್ತ ಕೇಂದ್ರೀಕೃತವಾಗಿದೆ.

ತಪ್ಪು ಮುಚ್ಚಿಕೊಳ್ಳಲು ತಪ್ಪು ಮಾಹಿತಿ: ಸಚಿವ ಶಿವಾನಂದ ಆಕ್ರೋಶ

• ಪ್ರಜೋದಯ ವರದಿ

ಹುಬ್ಬಳ್ಳಿ: ಕಬ್ಬು ಬೆಳೆದ ರೈತರಿಗೆ ನ್ಯಾಯಯುತ ಮತ್ತು ಲಾಭದಾಯಕ ಬೆಲೆ (ಎಫ್‌ಆರ್‌ಪಿ) ಮತ್ತು ಕನಿಷ್ಠ ಬೆಂಬಲ (ಎಂಎಸ್‌ಪಿ) ನಿಗದಿಪಡಿಸುವುದು ಕೇಂದ್ರ ಸರ್ಕಾರ. ತಮ್ಮ ತಪ್ಪನ್ನು ಮುಚ್ಚಿಟ್ಟುಕೊಳ್ಳಲು ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ರಾಜ್ಯ ಸರ್ಕಾರದ ವಿರುದ್ಧ ಆರೋಪಿಸುತ್ತಿದ್ದಾರೆಂದು ಸಕ್ಕರೆ ಸಚಿವ ಶಿವಾನಂದ ಪಾಟೀಲ ಆಕ್ರೋಶ ವ್ಯಕ್ತಪಡಿಸಿದರು.

ಕಬ್ಬು ಬೆಳೆಗಾರರ ಸಮಸ್ಯೆ ಕುರಿತು ರಾಜ್ಯ ಸರ್ಕಾರ ಕೇಂದ್ರ ಸರ್ಕಾರದ ಕಡೆ ಬೆರಳು ತೋರಿಸುತ್ತಿದೆ ಎನ್ನುವ ಸಚಿವ ಜೋಶಿ ಹೇಳಿಕೆಗೆ ಭಾನುವಾರ ಪ್ರತಿಕ್ರಿಯಿಸಿ, ರಾಜ್ಯದಲ್ಲಿ ಖಾಸಗಿ ಸಕ್ಕರೆ ಕಾರ್ಖಾನೆ ಮಾಲೀಕರ ಸಂಘದ ಅಧ್ಯಕ್ಷರು ಬಿಜೆಪಿಯವರೇ ಆಗಿದ್ದಾರೆ. ಅವರದ್ದೇ ಪಕ್ಷದ ನಾಯಕರ ಕಾರ್ಖಾನೆಗಳು ಸಹ ಸಾಕಷ್ಟಿವೆ. ಏನೇನು ಸಮಸ್ಯೆಗಳಿವೆ ಎನ್ನುವುದು ಸಂಘಕ್ಕೆ ತಿಳಿದಿದೆ. ಆದರೂ ಏನೂ ಆಗಿಲ್ಲ ಎನ್ನುವ ವರದಿ ನೀಡಲಾಗಿದೆ. ಈ ಕುರಿತು ಸಚಿವ ಜೋಶಿ ಸ್ಪಷ್ಟಪಡಿಸಬೇಕೆಂದು ಆಗ್ರಹಿಸಿದರು.

ಒಂದು ಟನ್‌ಗೆ ನಿಗದಿಪಡಿಸಿದ್ದ ಎಫ್‌ಆರ್‌ಪಿಗಿಂತ ರಾಜ್ಯ ಸರ್ಕಾರ 200 ರೂ. ಹೆಚ್ಚು ನೀಡಿದೆ. ಕೆಲವೆಡೆ 300 ರಿಂದ 350 ರೂ. ವರೆಗೂ ನೀಡಿದೆ. ಸಕ್ಕರೆ, ಎಥೆನಾಲ್ ಮಾರಾಟ ಮತ್ತು ನಿಯಂತ್ರಣ ಕೇಂದ್ರ ಸರ್ಕಾರದ ಅಧೀನದಲ್ಲಿದೆ. ರಫ್ತು ಮತ್ತು ಆಮದು ಸಹ ಅದರ ವ್ಯಾಪ್ತಿಗೆ ಒಳಪಡುತ್ತದೆ. ತನ್ನಲ್ಲಿ ಸಾಕಷ್ಟು ಗೊಂದಲ ಇಟ್ಟುಕೊಂಡು ರಾಜ್ಯ ಸರ್ಕಾರದ ವಿರುದ್ಧ ಮಾತನಾಡುವುದು ಸರಿಯಲ್ಲ ಎಂದರು.

ಮೆಕ್ಕೆಜೋಳಕ್ಕೆ ಬೆಂಬಲ ಬೆಲೆ ನೀಡಲು ಪ್ರಯತ್ನ ನಡೆಯುತ್ತಿದೆ. ಕನಿಷ್ಠ ಬೆಂಬಲ ನಿಗದಿ ಮಾಡುವುದು ಕೇಂದ್ರ ಸರ್ಕಾರದ ಜವಾಬ್ದಾರಿ. ಎಲ್ಲವನ್ನೂ ತಂದು ರಾಜ್ಯ ಸರ್ಕಾರದ ಮೇಲೆ ಹಾಕಿದರೆ ಏನು ಮಾಡಬೇಕು. ಪದೇ ಪದೇ ಪ್ರಲ್ಹಾದ ಜೋಶಿ, ಬಸವರಾಜ ಬೊಮ್ಮಾಯಿ ಅವರು ರಾಜ್ಯ ಸರ್ಕಾರವನ್ನೇ ಗುರಿಯಾಗಿಸಿಕೊಂಡು ಹೇಳಿಕೆ ನೀಡುತ್ತ, ಜನರ ದಿಕ್ಕು ತಪ್ಪಿಸುತ್ತಿದ್ದಾರೆಂದು ಕಿಡಿಕಾರಿದರು.

ಮುಖ್ಯಮಂತ್ರಿ ಅಧಿಕಾರ ಬದಲಾವಣೆ ಹಾಗೂ ಸಚಿವ ಸಂಪುಟ ವಿಸ್ತರಣೆ, ಪುನರ್ ರಚನೆ ಆಂತರಿಕ ವಿಚಾರವಾಗಿದ್ದು, ಹೈಕಮಾಂಡ್ ತೀರ್ಮಾನವೇ ಅಂತಿಮ. ಏನೇ ಆದರೂ ಪಕ್ಷದ ಜೊತೆಗೆ ಇರುತ್ತೇವೆಂದು ಶಿವಾನಂದ ಹೇಳಿದರು.

ಯುನೈಟೆಡ್ ಶಾಲೆಯಲ್ಲಿ ಮಕ್ಕಳ ದಿನಾಚರಣೆ

• ಪ್ರಜೋದಯ ವರದಿ

ಬೇಲೂರು: ಯುನೈಟೆಡ್ ಅಕಾಡೆಮಿ ಶಾಲೆಯಲ್ಲಿ ಮಕ್ಕಳಿಗೆ ವೇಷ ಭೂಷಣ ಸ್ಪರ್ಧೆ ಆಯೋಜನೆ ಮೂಲಕ ಮಕ್ಕಳ ದಿನ ಆಚರಿಸಲಾಯಿತು.

ಭಾರತದ ಮೊದಲ ಪ್ರಧಾನಿ ಜವಾಹರಲಾಲ್ ನೆಹರು ಜನ್ಮದಿನದ ಸ್ಮರಣಾರ್ಥ ನಡೆದ ಈ ಕಾರ್ಯಕ್ರಮದಲ್ಲಿ ಪುಟ್ಟ ವಿದ್ಯಾರ್ಥಿಗಳು ವಿವಿಧ ವೇಷಭೂಷಣದೊಂದಿಗೆ ಗಮನ ಸೆಳೆದರು.ಸ್ವಾತಂತ್ರ್ಯ ಹೋರಾಟಗಾರರ ವೇಷ ಧರಿಸಿ ದೇಶಾಭಿಮಾನ ಮೆರೆದರೆ ಗುಳಿಗ ದೈವ, ಪಾಂಡುರಂಗ, ವೆಂಕಟೇಶ, ಬುದ್ಧ ಇತ್ಯಾದಿಗಳ ವೇಷಭೂಷಣ ಧರಿಸಿ ಭಕ್ತಿ ಮೆರುಗು ತಂದರು. ಹಾಗೆಯೇ ವಿಶೇಷವಾಗಿ ಪ್ರಾಣಿ ಪಕ್ಷಿ, ಮರ, ರೈತರು ಮತ್ತು ಭೂಮಿಯ ರೂಪದಲ್ಲಿ ಬಂದು ಪರಿಸರ ಸಂರಕ್ಷಣೆ ಕುರಿತು ಸಂದೇಶ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸಂಸ್ಥೆಯ ಖಜಾಂಚಿ ಸಿ.ಹೆಚ್.ಲೋಕೇಶ್ ಅವರು, ಇಂದಿನ ಮಕ್ಕಳೇ ನಾಳಿನ ರಾಷ್ಟ್ರದ ರೂವಾರಿಗಳು. ಮಕ್ಕಳನ್ನು ದೇಶದ ಆಸ್ತಿಯನ್ನಾಗಿ ಮಾಡುವುದು ಬಹಳ ಮುಖ್ಯ. ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಒಳ್ಳೆಯ ಶಿಕ್ಷಣ ನೀಡುವುದು ಮಹತ್ವವಾದುದು. ಅವರನ್ನು ಉತ್ತಮವಾಗಿ ನೋಡಿಕೊಳ್ಳುವುದರ ಜೊತೆಗೆ ಅಗತ್ಯ ಶಿಕ್ಷಣವನ್ನು ಪೂರೈಸಬೇಕು ಎಂಬುದು ಸ್ವತಂತ್ರ ಭಾರತದ ಮೊದಲ ಪ್ರಧಾನಿ ಜವಾಹರಲಾಲ್ ನೆಹರು ಅವರ ಧ್ಯೇಯವಾಗಿತ್ತು. ಅವರ ಜನ್ಮದಿನದ ನೆನಪಿಗೆ ಮಕ್ಕಳ ದಿನಾಚರಣೆಯನ್ನು ನಮ್ಮ ಶಾಲೆಯಲ್ಲಿ ಆಚರಿಸುತ್ತಿದ್ದೇವೆ. ಶಿಕ್ಷಣದ ಜೊತೆಗೆ ಈ ರೀತಿಯ ಮಕ್ಕಳ ಆಸೆಗಳಿಗನುಗುಣವಾಗಿ ನಮ್ಮ ಶಾಲೆಯಲ್ಲಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುತ್ತೇವೆ. ಅದರಂತೆ ಮಕ್ಕಳಿಗೆ ಈ ವೇಷಭೂಷಣ ಸ್ಪರ್ಧೆ ನಡೆಸುತ್ತಿದ್ದೇವೆ ಎಂದರು.

ಕಾರ್ಯದರ್ಶಿ ಹೆಚ್. ಎಂ.ದಿನೇಶ್ ಅವರು ಮಾತನಾಡಿ, ಇಂತಹ ಸ್ಪರ್ಧೆಗಳು ಮಕ್ಕಳ ಸೃಜನಶೀಲತೆಯನ್ನು ಮತ್ತು ಆತ್ಮವಿಶ್ವಾಸವನ್ನು ಹೆಚ್ಚಿಸುತ್ತವೆ. ಮಕ್ಕಳಲ್ಲಿ ಹೊಸ ಉತ್ಸಾಹ ಮೂಡಿಸುವುದರ ಜೊತೆಗೆ ನಮ್ಮ ಸಂಸ್ಕೃತಿ ಮತ್ತು ಇತಿಹಾಸದ ಬಗ್ಗೆ ತಿಳವಳಿಕೆ ನೀಡುತ್ತದೆ. ಮಕ್ಕಳ ಆಸೆಗಳಿಗೆ ನೀರುಣಿಸಿ ಪೋಷಿಸಿ ಫಲವನ್ನು ಪಡೆಯಬೇಕಾದುದು ಪೋಷಕರ ಕರ್ತವ್ಯವೆಂದರು.

ವೇಷಭೂಷಣ ಸ್ಪರ್ಧೆಯ ತೀರ್ಪುಗಾರರಾಗಿ ಶಿಕ್ಷಕರಾದ ಡಿ.ಎಂ. ರಂಗನಾಥ್, ಹೆಚ್.ಎಂ.ಪ್ರೀತಿ ಮತ್ತು ಭಾಗ್ಯ ಕಾರ್ಯನಿರ್ವಹಿಸಿದರು. ಮುಖ್ಯಶಿಕ್ಷಕಿ ಎಂ.ಎನ್.ದೀಪ, ಶಿಕ್ಷಕಿ ಅಸ್ಮಾ ಮತ್ತು ಸಿಬ್ಬಂದಿ ಹಾಜರಿದ್ದರು.

ನ.26 ರಂದು ರಾಮನಾಥಪುರ ಸುಬ್ರಹ್ಮಣ್ಯಸ್ವಾಮಿ ಮಹಾರಥೋತ್ಸವ

• ಪ್ರಜೋದಯ ವರದಿ

ಅರಕಲಗೂಡು : ದಕ್ಷಿಣ ಕಾಶೀ ಎಂದೆ ಪ್ರಸಿದ್ಧಿ ಪಡೆದಿರುವ ತಾಲೂಕಿನ ರಾಮನಾಥಪುರದ ಕಾವೇರಿ ನದಿ ದಡದಲ್ಲಿರುವ ಪ್ರಸನ್ನ ಶ್ರೀ ಸುಬ್ರಹ್ಮಣ್ಯಸ್ವಾಮಿಯವರ ಮಹಾರಥೋತ್ಸವ ನ.26ರಂದು ನಡೆಯಲಿದ್ದು, ದೇವಾಲಯ ಆಡಳಿತ ಮಂಡಳಿ ಹಾಗೂ ಸ್ಥಳೀಯ ಗ್ರಾಮ ಪಂಚಾಯಿತಿ ಆಡಳಿತ ಸಕಲ ಸಿದ್ಧತೆ ಮಾಡಿಕೊಂಡಿದೆ.

ಒಂದು ತಿಂಗಳ ಕಾಲ ನಡೆಯುವ ಶ್ರೀ ಸುಬ್ರಹ್ಮಣ್ಯಸ್ವಾಮಿ ರಥೋತ್ಸವ ಅಂಗವಾಗಿ ಜಿಲ್ಲೆ ಸೇರಿ ದೂರದ ಊರುಗಳಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಲಿದ್ದಾರೆ. ಇದೊಂದು ರೀತಿಯ ಭಕ್ತರ ಧಾರ್ಮಿಕ ದೊಡ್ಡ ಹಬ್ಬವಾಗಿ ಆಚರಣೆಯಾಗಿ ನಡೆದುಕೊಂಡು ಬರುತ್ತಿದೆ.

ರಥೋತ್ಸವಕ್ಕೆ ಒಂದೆರಡು ದಿನಗಳು ಬಾಕಿ ಇದ್ದು, ಆಗಮಿಸುವ ಭಕ್ತಾಧಿಗಳಿಗೆ ಪೂರಕವಾದ ಸಿದ್ಧತೆಯನ್ನು ಮಾಡಿಕೊಳ್ಳಲಾಗುತ್ತಿದೆ. ದೇವಾಲಯಕ್ಕೆ ನೂತನವಾಗಿ ಬಣ್ಣವನ್ನು ಲೇಪನ ಮಾಡಿ ವಿದ್ಯುತ್ ದೀಪಗಳಿಂದ ಶೃಂಗರಿಸಲಾಗಿದೆ. ಈಗಾಗಲೇ ಕಳೆದ ನ.16ರಿಂದಲೂ ಕೂಡ ರಾತ್ರಿ ಹಗಲು ವಿವಿಧ ಪೂಜಾಕೈಂಕರ್ಯಗಳು ಜರುಗುತ್ತಿವೆ. ವಿಶೇಷವಾಗಿ ನ.26 ರಂದು ನಡೆಯುವ ಮಹಾ ರಥೋತ್ಸವ ಮತ್ತು ಡಿಸೆಂಬರ್ 26ರಂದು ಜರುಗುವ ತುಳು ಷಷ್ಠಿ ಮಹಾ ರಥೋತ್ಸವದಂದು ಅಪಾರ

ಕಾವೇರಿ ನದಿ ಸ್ವಚ್ಛತೆ | ಇಡೀ ಪಟ್ಟಣಕ್ಕೆ ದೀಪಾಲಂಕಾರ

ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿ ದೇವರ ಕೃಪೆಗೆ ಪಾತ್ರರಾಗುತ್ತಾರೆ.

ರಾಮನಾಥಪುರ ಗ್ರಾಮ ಪಂಚಾಯಿತಿ ವತಿಯಿಂದ ಇಡೀ ಪಟ್ಟಣವನ್ನು ದೀಪಾಲಂಕಾರ ದಿಂದ ಶೃಂಗರಿಸಲಾಗಿದೆ. ಪೌರಕಾರ್ಮಿಕರು ನಿತ್ಯವೂ ಪಟ್ಟಣವನ್ನು ಸ್ವಚ್ಛಗೊಳಿಸುತ್ತಿದ್ದಾರೆ. ಕುಡಿಯುವ ನೀರು ಸೇರಿ ಇತರೆ ಮೂಲಸೌಕರ್ಯಗಳನ್ನು ಕೈಗೊಳ್ಳಲಾಗುತ್ತಿದೆ.

ದೇವಾಲಯ ಪಕ್ಕದಲ್ಲಿ ಹರಿಯುವ ಕಾವೇರಿ ನದಿಯಲ್ಲಿ ನೀರಿನ ಹರಿಯುವಿಕೆ ಕುಂಠಿತಗೊಂಡಿದ್ದು, ಜಾತ್ರೆಗೆ ಬರುವ ಭಕ್ತರು ಪುಣ್ಯ ಸ್ನಾನ, ದೇವರಿಗೆ ಹರಕೆ ತೀರಿಸುವುದನ್ನು ಮನಗಂಡಿರುವ ಗ್ರಾಮ ಪಂಚಾಯಿತಿ ಆಡಳಿತ ಇದೇ ಮೊದಲ ಬಾರಿಗೆ ನದಿಯಲ್ಲಿನ ಹೂಳು ತೆಗೆಯುವಿಕೆ ಸೇರಿ ನೀರು, ಸ್ನಾನ ಘಟ್ಟ ಸ್ವಚ್ಛಗೊಳಿಸುವ ಕಾಯಕವನ್ನು ಕೈಗೊಂಡಿದೆ. ದೊಡ್ಡ ಎದೆಗಾರಿಕೆಯಿಂದ ಹಿಟ್ಯಾಚಿ ವಾಹನವನ್ನು ನದಿಗೆ ಇಳಿಸಿ ಮಲೀನತೆ ಹರಡುತ್ತಿದ್ದ ಗಿಡಗಂಟಿಗಳು, ಕೆಸರು ತೆಗೆಯುವ ಕಾಯಕವನ್ನು ನಿರ್ವಹಿಸಲಾಗುತ್ತಿದೆ. ಇದರಿಂದ ಕಾವೇರಿ ನದಿ ಒಡಲು ಸುಂದರವಾಗಿ ಕಾಣುವಂತಾಗಿದೆ. ವಿಶೇಷವಾಗಿ ನದಿಯಲ್ಲಿನ ಪುರಾಣ ಪ್ರಸಿದ್ಧ ಗಾಯತ್ರಿ ಶಿಲೆ, ಗೋಗರ್ಭ, ಕುಮಾರಧಾರ ದರ್ಶನಗಳನ್ನು ಮಾಡುವಂತೆ ವ್ಯವಸ್ಥೆ ಕಲ್ಪಿಸಲಾಗಿದೆ. ಕಾವೇರಿ ನದಿಯಲ್ಲಿ ಪುಣ್ಯ ಸ್ನಾನ ಮಾಡಿ ಮಡಿ ಬಟ್ಟೆ ತೊಡುವ ಸಲುವಾಗಿ ನದಿ ಪಾತ್ರದಲ್ಲಿ ರಕ್ಷಣಾ ಶೆಡ್‌ಗಳನ್ನು ನಿರ್ಮಿಸಲಾಗಿದೆ. ಅಲ್ಲದೆ ಕಟ್ಟೆಚ್ಚರದಿಂದ ಜನನಿಬಿಡ ಪ್ರದೇಶದಲ್ಲಿ ಸಿಸಿ ಕ್ಯಾಮೆರಾ ಅಳವಡಿಸುವ ಕೆಲಸ ನಡೆದಿದೆ.

ಬಹು ಆಕರ್ಷಣೀಯ ವಹ್ನೀ ಪುಷ್ಕರಣಿ

ಸದಾ ಮಲೀನತೆಯಿಂದ ಕೂಡಿರುತ್ತಿದ್ದ ಪುರಾಣ ಪ್ರಸಿದ್ಧ ವಹ್ನೀ ಪುಷ್ಕರಣೀಯನ್ನು ಈ ಬಾರಿ ಗ್ರಾಮ ಪಂಚಾಯಿತಿ ವತಿಯಿಂದ ಸ್ವಚ್ಛಗೊಳಿಸಿ ಸುಂದರಗೊಳಿಸಲಾಗಿದೆ. ಮೀನುಗಳನ್ನು ನೋಡಲು ಬರುವ ಭಕ್ತರು ಕಡ್ಲೆಕಾಯಿ, ಪುರಿ ಸೇರಿ ಇತರೆ ಆಹಾರ ಪದಾರ್ಥಗಳನ್ನು ಮೀನುಗಳಿಗೆ ಹಾಕಿ ಹೋಗುವ ವೇಳೆ ಮಲೀನತೆ ಉಂಟಾಗುತ್ತಿತ್ತು.ಆದರೆ ಈ ಬಾರಿ ಎಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ. ಮೀನುಗಳನ್ನು ನೋಡಲು ಬರುವ ಎಲ್ಲಾ ಭಕ್ತರಿಗೆ ಮೀನುಗಳು ದರ್ಶನ ನೀಡಲಿವೆ.

**ಶ್ರೀ ಸುಬ್ರಹ್ಮಣ್ಯಸ್ವಾಮಿ